# ಪೊಲೀಸ್ ಇಲಾಖೆ

## ಪ್ರಶಂಸನೀಯ ಕ್ರೀಡಾಪಟುಗಳ ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್) ಮತ್ತು ಪೊಲೀಸ್ ಸಬ್-ಇನ್ಸ್‌ಪೆಕ್ಟರ್ (ಸಿವಿಲ್) ಹುದ್ದೆಗಳ ನೇಮಕಾತಿ

## (ISO: 9001-2015 ಪ್ರಮಾಣಿತ ನೇಮಕಾತಿ ಪ್ರಕ್ರಿಯೆ)
## ಅಧಿಸೂಚನೆ ಸಂಖ್ಯೆ: 15/ನೇಮಕಾತಿ-2/2021-22

ವಿಷಯ: ಪ್ರಶಂಸನೀಯ ಕ್ರೀಡಾಪಟುಗಳ ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್) ಮತ್ತು ಪೊಲೀಸ್ ಸಬ್-ಇನ್ಸ್‌ಪೆಕ್ಟರ್ (ಸಿವಿಲ್) (ಪುರುಷ & ಮಹಿಳಾ) ಹಾಗೂ ಸೇವೆಯಲ್ಲಿರುವವರ ಮಿಕ್ಕುಳಿದ ವೃಂದದ ಮತ್ತು ಕಲ್ಯಾಣ-ಕರ್ನಾಟಕ ಪ್ರದೇಶದ ಸ್ಥಳೀಯ ವೃಂದದ ಖಾಲಿ ಹುದ್ದೆಗಳ ನೇರ ನೇಮಕಾತಿ ಕುರಿತು.

~*~*~*~

1. ಕರ್ನಾಟಕ ರಾಜ್ಯದ, ಪೊಲೀಸ್ ಇಲಾಖೆಯಲ್ಲಿ ಪೊಲೀಸ್ ಕಾನ್ಸ್‌ಟೇಬಲ್ ಮತ್ತು ಪೊಲೀಸ್ ಸಬ್-ಇನ್ಸ್‌ಪೆಕ್ಟರ್ (ಸಿವಿಲ್) (ಪುರುಷ & ಮಹಿಳಾ) ಹಾಗೂ ಸೇವೆಯಲ್ಲಿರುವವರ ಮಿಕ್ಕುಳಿದ ವೃಂದದ ಮತ್ತು ಕಲ್ಯಾಣ-ಕರ್ನಾಟಕ ಪ್ರದೇಶದ ಸ್ಥಳೀಯ ವೃಂದದ ಖಾಲಿ ಹುದ್ದೆಗಳನ್ನು ಪ್ರಶಂಸನೀಯ ಕ್ರೀಡಾಪಟುಗಳ ನೇರ ನೇಮಕಾತಿಗಾಗಿ ಕರ್ನಾಟಕ ರಾಜ್ಯ ಪೊಲೀಸ್ ಲಿಪಿಕ ನೌಕರರ ಸೇವೆಗಳು ಸೇರಿದಂತೆ (ನೇಮಕಾತಿ) ನಿಯಮ 2004 ಮತ್ತು ಅದರ (ತಿದ್ದುಪಡಿ) ನಿಯಮ, 2009 ಮತ್ತು 2016 ಕರ್ನಾಟಕ ಸಾರ್ವಜನಿಕ ಉದ್ಯೋಗ (ಕಲ್ಯಾಣ-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ 2013 ಮತ್ತು ಕರ್ನಾಟಕ ರಾಜ್ಯ ಪೊಲೀಸ್ ಸೇವೆಗಳು (ಪೊಲೀಸ್ ಕಾನ್ಸ್‌ಟೇಬಲ್, ಪೊಲೀಸ್ ಸಬ್-ಇನ್ಸ್‌ಪೆಕ್ಟರ್ ಮತ್ತು ಉಪ ಪೊಲೀಸ್ ಅಧೀಕ್ಷಕರ ಹುದ್ದೆಗಳಿಗೆ ಪ್ರಶಂಸನೀಯ ಕ್ರೀಡಾಪಟುಗಳ ನೇರ ನೇಮಕಾತಿ) (ವಿಶೇಷ) ನಿಯಮಗಳು, 2020 ಹಾಗೂ ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಾವಳಿ 1977 ಮೇಲೆ ತಿಳಿಯಪಡಿಸಿದ ನಿಯಮಗಳಿಗೆ ಕಾಲಕಾಲಕ್ಕೆ ಆಗುವ ತಿದ್ದುಪಡಿಗಳ ಅನುಸಾರ ಈ ಅಧಿಸೂಚನೆಯನ್ನು ಪ್ರಕಟಿಸುತ್ತ ಅರ್ಹ ಅಭ್ಯರ್ಥಿಗಳಿಂದ ಆನ್-ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

**ಅರ್ಜಿಗಳನ್ನು ಇಲಾಖೆಯ ಅಧಿಕೃತ ವೆಬ್‌ಸೈಟ್ www.recruitment.ksp.gov.in ನಲ್ಲಿ ಆನ್-ಲೈನ್ (On-line) (ಎಲೆಕ್ಟ್ರಾನಿಕ್ ಮಾರ್ಗ) ಮುಖಾಂತರ ಮಾತ್ರ ಸಲ್ಲಿಸತಕ್ಕದ್ದು, ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವುದಿಲ್ಲ.**

**<u>ವಿಶೇಷ ಸೂಚನೆಗಳು:-</u>**

a) **ಕಲ್ಯಾಣ ಕರ್ನಾಟಕ ಪ್ರದೇಶದ ಸ್ಥಳೀಯ ವ್ಯಕ್ತಿಗಳು ಸ್ಥಳೀಯ ವೃಂದದ ಹುದ್ದೆ ಹಾಗೂ ಮಿಕ್ಕುಳಿದ ವೃಂದದ (ಪರಸ್ಥಳೀಯ) ಹುದ್ದೆ ಈ ಎರಡೂ ವೃಂದದ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.**

b) **ಒಂದು ವೇಳೆ ಕಲ್ಯಾಣ ಕರ್ನಾಟಕ ಪ್ರದೇಶದ ಸ್ಥಳೀಯ ಅಭ್ಯರ್ಥಿಯು ಪ್ರಸ್ತುತ ನೇಮಕಾತಿಗೆ ಸಂಬಂಧಿಸಿದಂತೆ ಮಿಕ್ಕುಳಿದ (ಪರಸ್ಥಳೀಯ) ವೃಂದದ ಹುದ್ದೆಯನ್ನು ಆಯ್ಕೆ ಮಾಡಿಕೊಂಡು ನೇಮಕಾತಿ ಹೊಂದಿದಲ್ಲಿ ಅಂತಹ ಅಭ್ಯರ್ಥಿಯು ಜಾರಿಯಲ್ಲಿರುವ ನಿಯಮದಂತೆ ತನ್ನ ಸೇವಾ ಅವಧಿಯಲ್ಲಿ ಅನುಚ್ಛೇದ 371ಜೆ ಮೀಸಲಾತಿ ಸೌಲಭ್ಯಗಳನ್ನು ಪಡೆಯಲು ಅವಕಾಶವಿರುವುದಿಲ್ಲ ಎಂಬುದನ್ನು ಸ್ಪಷ್ಟೀಕರಿಸಲಾಗಿದೆ.**

c) **ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕವು ಮುಕ್ತಾಯವಾದ ನಂತರ 10 ದಿನಗಳ ಕಾಲಾವಕಾಶ ನೀಡಲಾಗುತ್ತಿದ್ದು, ಸದರಿ ದಿನಾಂಕದೊಳಗಾಗಿ ಅಭ್ಯರ್ಥಿಯು ತಾನು ಸಲ್ಲಿಸಿರುವ ಅರ್ಜಿಯಲ್ಲಿ ಹೆಸರು, ಜನ್ಮ ದಿನಾಂಕ, ಕೋರಿರುವ ಮೀಸಲಾತಿ ಹಾಗೂ ಇತರೆ ಯಾವುದೇ ಅಂಶಗಳ ಬದಲಾವಣೆ ಮಾಡಬೇಕಾದಲ್ಲಿ ಖುದ್ದಾಗಿ / ಅಂಚೆ ಮೂಲಕ ಸಂಬಂಧಪಟ್ಟ ದೃಢೀಕೃತ ದಾಖಲೆಗಳೊಂದಿಗೆ ಅಡಿಷನಲ್ ಡೈರೆಕ್ಟರ್ ಜನರಲ್ ಆಫ್ ಪೊಲೀಸ್, ನೇಮಕಾತಿ ಕಾರ್ಲಟನ್ ಭವನ, ಅರಮನೆ ರಸ್ತೆ, ಬೆಂಗಳೂರು ರವರ ಕಛೇರಿಗೆ ಸಲ್ಲಿಸತಕ್ಕದ್ದು. ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಸಲ್ಲಿಸುವ ಯಾವುದೇ ಮನವಿಗಳನ್ನು ಪರಿಗಣಿಸಲಾಗುವುದಿಲ್ಲ.**

d) **ಅಭ್ಯರ್ಥಿಗಳು ಅವರ ಅರ್ಹತೆ ತಕ್ಕಂತೆ ಪಿ.ಎಸ್.ಐ (ಸಿವಿಲ್) ಮತ್ತು ಪಿಸಿ (ಸಿವಿಲ್) ಅಥವಾ ಎರಡೂ ಹುದ್ದೆಗಳಿಗೂ ಪ್ರತ್ಯೇಕವಾಗಿ ಅರ್ಜಿ ಸಲ್ಲಿಸಬಹುದಾಗಿರುತ್ತದೆ. ಎರಡು ಹುದ್ದೆಗಳಿಗೆ ಪ್ರತ್ಯೇಕವಾಗಿ ಅರ್ಹತಾ ಪಟ್ಟಿ / ಆಯ್ಕೆಪಟ್ಟಿಯನ್ನು ತಯಾರಿಸಲಾಗುತ್ತದೆ. ಎರಡೂ ಹುದ್ದೆಗಳಿಗೂ ಆಯ್ಕೆಯಾದಲ್ಲಿ ಅಂತಹ ಅಭ್ಯರ್ಥಿಯು ಯಾವ ಹುದ್ದೆಯನ್ನು ಆಯ್ಕೆ ಮಾಡುತ್ತಾನೋ ಅದನ್ನು ಹೊರತುಪಡಿಸಿ ಮತ್ತೊಂದು ಹುದ್ದೆಯ ಆಯ್ಕೆ ಪಟ್ಟಿಯಿಂದ ಅವರ ಹೆಸರನ್ನು ತೆಗೆದು ಹಾಕಲಾಗುವುದು.**

2. **ಶುಲ್ಕ:**

**i. ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಗಳಿಗೆ**

| | |
|---|---|
| ಸಾಮಾನ್ಯ ವರ್ಗ, ಪ್ರವರ್ಗ 2(ಎ), 2(ಬಿ), 3(ಎ), 3(ಬಿ) ಗೆ ಸೇರಿದ ಅಭ್ಯರ್ಥಿಗಳಿಗೆ | ₹. 400/– |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1ಕ್ಕೆ ಸೇರಿದ ಅಭ್ಯರ್ಥಿಗಳಿಗೆ | ₹. 200/- |

**ii. ಪೊಲೀಸ್ ಸಬ್–ಇನ್ಸ್‌ಪೆಕ್ಟರ್ ಹುದ್ದೆಗಳಿಗೆ**

| | |
|---|---|
| ಸಾಮಾನ್ಯ ವರ್ಗ, ಪ್ರವರ್ಗ 2(ಎ), 2(ಬಿ), 3(ಎ), 3(ಬಿ) ಗೆ ಸೇರಿದ ಅಭ್ಯರ್ಥಿಗಳಿಗೆ | ₹. 500/– |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1ಕ್ಕೆ ಸೇರಿದ ಅಭ್ಯರ್ಥಿಗಳಿಗೆ | ₹. 250/- |

a) ನಿಗದಿತ ಶುಲ್ಕವನ್ನು ನಗದು / ಆನ್‌ಲೈನ್ ರೂಪದಲ್ಲಿ **ಸ್ಥಳೀಯ ಅಂಚೆ ಕಛೇರಿಗಳಲ್ಲಿ ಅಥವಾ ಹೆಚ್.ಡಿ.ಎಫ್.ಸಿ ಬ್ಯಾಂಕಿನ ಅಧಿಕೃತ ಶಾಖೆಗಳಲ್ಲಿ** ಪಾವತಿಸಿ ನಂತರ ಚಲನ್‌ನ 'ಅಭ್ಯರ್ಥಿ ಪ್ರತಿ'ಯನ್ನು ಇಟ್ಟುಕೊಂಡಿರತಕ್ಕದ್ದು.

b) ಇಲಾಖೆಯ ಅಧಿಕೃತ ವೆಬ್‌ಸೈಟ್ www.recruitment.ksp.gov.in ನಲ್ಲಿ ನೀಡಲಾಗಿರುವ ಸೂಚನೆಗಳನ್ನು ಓದಿಕೊಂಡು ಯಾವುದೇ ತಪ್ಪು ಮಾಹಿತಿ ನೀಡದೆ ಆನ್–ಲೈನ್‌ನಲ್ಲಿ ಲಭ್ಯವಿರುವ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು.

**ಟಿಪ್ಪಣಿ:** ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ ಅಥವಾ ಅದನ್ನು ನೇಮಕಾತಿ ಸಮಿತಿಯು ನಡೆಸುವ ಇತರೆ ಯಾವುದೇ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ಮೇಲಿನ ಕಾಲಂಗಳಲ್ಲಿ ನಮೂದಿಸಿದಂತೆ ಅಭ್ಯರ್ಥಿಗೆ ಅನ್ವಯಿಸುವ ಒಟ್ಟು ಪರೀಕ್ಷಾ ಶುಲ್ಕವನ್ನು **ಆನ್‌ಲೈನ್ / ನಗದು ರೂಪದಲ್ಲಿ ಚಲನ್ ನೊಂದಿಗೆ ಮಾತ್ರ ಮೇಲೆ ನಮೂದಿಸಿರುವ ಬ್ಯಾಂಕ್‌ಗಳಲ್ಲಿ ಮತ್ತು ಅಂಚೆ ಕಛೇರಿಗಳಲ್ಲಿ** ಪಾವತಿಸತಕ್ಕದ್ದು. **ಡಿಡಿ, ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ.**

3. **ಆನ್–ಲೈನ್ (On-line) ಮುಖಾಂತರ ಅರ್ಜಿ ಸಲ್ಲಿಸುವ ಹಾಗೂ ಶುಲ್ಕ ಪಾವತಿಸುವ ವಿಧಾನ:**

ಅರ್ಜಿದಾರ ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಇಲಾಖೆಯ ಅಧಿಕೃತ ವೆಬ್‌ಸೈಟ್ www.recruitment.ksp.gov.in ನಲ್ಲಿ ನೀಡಲಾಗಿರುವ ಮಾಹಿತಿಸೂಚಿ / ಸೂಚನೆಗಳನ್ನು ಜಾಗರೂಕತೆಯಿಂದ ಓದಿಕೊಂಡು ಭರ್ತಿ ಮಾಡಬೇಕು. ಇಲಾಖೆಯ ಅಧಿಕೃತ ವೆಬ್‌ಸೈಟ್ www.recruitment.ksp.gov.in ನಲ್ಲಿ ನೀಡಲಾಗಿರುವ ಅಧಿಸೂಚನೆಯನ್ನು ಓದಿಕೊಂಡು ಯಾವುದೇ ತಪ್ಪು ಮಾಹಿತಿಯನ್ನು ನೀಡದೇ ಆನ್–ಲೈನ್‌ನಲ್ಲಿ ಲಭ್ಯವಿರುವ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು. ತಪ್ಪು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸಿದ್ದಲ್ಲಿ ಅಂತಹವರ ವಿರುದ್ಧ ಕಾನೂನಿನನ್ವಯ ನೇಮಕಾತಿ ಸಮಿತಿಯು ಸೂಕ್ತ ಕ್ರಮ ಕೈಗೊಳ್ಳುವುದು.ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಅರ್ಜಿದಾರ ಒಂದು ಬಿಳಿ ಹಾಳೆಯ ಮೇಲೆ ಪಾಸ್‌ಪೋರ್ಟ್ ಅಳತೆಯ ಬಣ್ಣದ ಭಾವಚಿತ್ರ, ಸಹಿ ಮತ್ತು ಅಧಿಸೂಚನೆಯ ಕ್ರಮ ಸಂಖ್ಯೆ 11 ರಲ್ಲಿ ನಮೂದಿಸಲಾಗಿರುವ ಯಾವುದಾದರು ಗುರುತಿನ ಚೀಟಿಯನ್ನು ಪ್ರತ್ಯೇಕವಾಗಿ (Soft Copy - less than 250 KB) ಸ್ಕ್ಯಾನ್ ಮಾಡಿಟ್ಟುಕೊಂಡಿರಬೇಕು. ನಂತರ ಅರ್ಜಿದಾರನ ಹೆಸರು, ಜಾತಿ, ಪ್ರವರ್ಗ, ಮೀಸಲಾತಿಗಳ ವಿವರ, ಹುಟ್ಟಿದ ದಿನಾಂಕ, ವಿದ್ಯಾರ್ಹತೆ ಮತ್ತು ಇತ್ಯಾದಿ ವಿವರಗಳನ್ನು ಭರ್ತಿ ಮಾಡಿ ಕೊನೆಯದಾಗಿ ಸ್ಕ್ಯಾನ್ ಮಾಡಿಟ್ಟುಕೊಂಡಿರುವ ಭಾವಚಿತ್ರ, ಸಹಿ ಮತ್ತು ಗುರುತಿನ ಚೀಟಿಯನ್ನು ಕಂಪ್ಯೂಟರ್ ಮುಖೇನ ಅಪ್‌ಲೋಡ್ (Upload) ಮಾಡಬೇಕು. ಇಲ್ಲವಾದಲ್ಲಿ ಅಂತಹ ಅರ್ಜಿದಾರರು ಆನ್‌ಲೈನ್‌ನಲ್ಲಿ ಅರ್ಜಿಯನ್ನು ತುಂಬಿ ಮುಂದುವರೆಯಲು ಸಾಧ್ಯವಾಗುವುದಿಲ್ಲ. ಅರ್ಜಿದಾರ ನೀಡಿರುವ ವಿವರಗಳು ಎಲ್ಲಾ ರೀತಿಯಿಂದಲೂ ಸಮರ್ಪಕವಾಗಿದ್ದಲ್ಲಿ ಮಾತ್ರ ಚಲನ್ ಮುದ್ರಿಸಬಹುದು. ಚಲನ್ ಮುದ್ರಿಸಲು ಜನರೇಟ್ ಚಲನ್ ಬಟನ್ ಮೇಲೆ ಕ್ಲಿಕ್ ಮಾಡಿದಾಗ ತ್ರಿಪ್ರತಿ (Triplicate) ಬ್ಯಾಂಕ್ ಚಲನ್ ಸೃಜನೆಯಾಗುತ್ತದೆ. ಆ ಚಲನ್‌ನಲ್ಲಿ ಅರ್ಜಿಯ ಸಂಖ್ಯೆಯೊಂದಿಗೆ, ಆಯ್ಕೆ ಮಾಡಿರುವ ಘಟಕ, ನಿಮ್ಮ ಭಾವಚಿತ್ರ, ಪ್ರವರ್ಗ, ಮೀಸಲಾತಿಗಳ ವಿವರ ಮತ್ತು ಪಾವತಿಸಬೇಕಾಗಿರುವ ನಿಗದಿತ ಶುಲ್ಕಗಳ ವಿವರಗಳು ಇರುತ್ತವೆ. ಆ ಚಲನ್ ಪ್ರತಿಯನ್ನು ಮುದ್ರಿಸಿ / ಪ್ರಿಂಟ್ ಮಾಡಿಕೊಳ್ಳತಕ್ಕದ್ದು.

ನಂತರ ಅರ್ಜಿದಾರ ಮುದ್ರಿಸಿಕೊಳ್ಳಲಾದ ಚಲನ್‌ನಲ್ಲಿ ನಮೂದಾಗಿರುವ ಒಟ್ಟು ಶುಲ್ಕವನ್ನು **ಸ್ಥಳೀಯ ಅಂಚೆ ಕಛೇರಿಗಳಲ್ಲಿ ಅಥವಾ ಹೆಚ್.ಡಿ.ಎಫ್.ಸಿ ಬ್ಯಾಂಕಿನ ಅಧಿಕೃತ ಶಾಖೆಗಳಲ್ಲಿ ಆನ್‌ಲೈನ್ / ನಗದು ರೂಪದಲ್ಲಿ ಪಾವತಿಸಿ ನಂತರ ಚಲನ್‌ನ 'ಅಭ್ಯರ್ಥಿ ಪ್ರತಿಯನ್ನು ಇಟ್ಟುಕೊಂಡಿರತಕ್ಕದ್ದು.**

ಅಭ್ಯರ್ಥಿಯು ಶುಲ್ಕ ಪಾವತಿಸಿದ ಎರಡು ದಿನಗಳ ನಂತರ ಪುನಃ ಇಲಾಖೆಯ ಅಧಿಕೃತ ವೆಬ್‌ಸೈಟ್ www.recruitment.ksp.gov.in ನಲ್ಲಿ My Application ನ್ನು ಕ್ಲಿಕ್ ಮಾಡಿ, ತಮ್ಮ ಅರ್ಜಿ ಸಂಖ್ಯೆ ಮತ್ತು ಜನ್ಮ ದಿನಾಂಕ ನಮೂದಿಸಿದ ನಂತರ ಅರ್ಜಿ ತೆರೆಯುತ್ತದೆ ಹಾಗೂ ಅಭ್ಯರ್ಥಿಯು ಭರ್ತಿ ಮಾಡಿರುವ ಎಲ್ಲಾ ವಿವರಗಳನ್ನು ಒಳಗೊಂಡಂತೆ ಅರ್ಜಿಯು ಸೃಜನೆಯಾಗುತ್ತದೆ, ಸದರಿ ಅರ್ಜಿಯ ಪ್ರತಿಯನ್ನು ಪ್ರಿಂಟ್ ಮಾಡಿಟ್ಟುಕೊಳ್ಳತಕ್ಕದ್ದು. ಅರ್ಜಿ ಪ್ರತಿ ಮತ್ತು ಅರ್ಜಿ ಸಂಖ್ಯೆಯು ಮುಂದಿನ ನೇಮಕಾತಿ ಪ್ರಕ್ರಿಯೆಯ ಎಲ್ಲಾ ಹಂತಗಳಿಗೆ ಅವಶ್ಯಕವಾಗಿರುತ್ತದೆ.

**ಪ್ರಮುಖ ದಿನಾಂಕಗಳ ಮಾಹಿತಿ:**

- **ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 31.08.2021 ಬೆಳಿಗ್ಗೆ 10.00 ಗಂಟೆಗೆ**
- **ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 29.09.2021 ಸಂಜೆ 06.00 ಗಂಟೆಗೆ**
- **ಶುಲ್ಕವನ್ನು ಅಧಿಕೃತ ಬ್ಯಾಂಕ್ ಅಥವಾ ಅಂಚೆ ಕಛೇರಿಗಳ ವೇಳೆಯಲ್ಲಿ ಪಾವತಿಸಲು ಕೊನೆಯ ದಿನಾಂಕ: 01.10.2021.**

**ಸೂಚನೆ:**

- ಪೊಲೀಸ್ ಇಲಾಖೆಯ ಅಧಿಕೃತ ವೆಬ್‌ಸೈಟ್‌ನಲ್ಲಿ ನೀಡಲಾಗಿರುವ ಅರ್ಜಿಯನ್ನು ನಿಗದಿತ ದಿನಾಂಕದೊಳಗೆ ಭರ್ತಿ ಮಾಡಿ ಸಲ್ಲಿಸಿರುವಂತ ಅರ್ಜಿಯನ್ನು ಮಾತ್ರ ಪರಿಗಣಿಸಲಾಗುವುದು.
- ತಪ್ಪು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸಿದ್ದಲ್ಲಿ ಅಂತಹವರ ವಿರುದ್ಧ ಕಾನೂನಿನನ್ವಯ ನೇಮಕಾತಿ ಸಮಿತಿಯು ಸೂಕ್ತ ಕ್ರಮ ಕೈಗೊಳ್ಳುವುದು.
- ಆನ್‌ಲೈನ್ ಮೂಲಕ ಅರ್ಜಿಯನ್ನು ಭರ್ತಿಮಾಡುವ ಸಂದರ್ಭದಲ್ಲಿ ಸಮಸ್ಯೆ ಎದುರಾದಲ್ಲಿ ಸಹಾಯವಾಣಿ (Help line) 080–22943346 ಅನ್ನು ಸಂಪರ್ಕಿಸಿ ಅಗತ್ಯ ಮಾಹಿತಿ ಪಡೆದು ಅರ್ಜಿ ಸಲ್ಲಿಸಬಹುದು. ಹಾಗೂ ತಾಂತ್ರಿಕ ತೊಂದರೆ ಎದುರಾದಲ್ಲಿ ಅದನ್ನು ಸ್ಥಗಿತಗೊಳಿಸಿ ಮತ್ತೊಮ್ಮೆ ಅಧಿಕೃತ ವೆಬ್‌ಸೈಟ್‌ನಲ್ಲಿ ನೀಡಲಾಗಿರುವ ಅರ್ಜಿಯನ್ನು ಭರ್ತಿ ಮಾಡಲು ತಿಳಿಸಲಾಗಿದೆ.

**ಟಿಪ್ಪಣಿ: ಈ ಕೆಳಗೆ ನಮೂದಿಸಿರುವ ಖಾಲಿ ಹುದ್ದೆಗಳ ಸಂಖ್ಯೆಯು ತಾತ್ಕಾಲಿಕವಾಗಿದ್ದು, ಅನಿವಾರ್ಯ ಸಂದರ್ಭದಲ್ಲಿ ಬದಲಾವಣೆಗೆ ಒಳಪಟ್ಟಿರುತ್ತದೆ.**

**ಪ್ರಶಂಸನೀಯ ಕ್ರೀಡಾಪಟುಗಳ ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್) ಮತ್ತು ಪೊಲೀಸ್ ಸಬ್–ಇನ್ಸ್‌ಪೆಕ್ಟರ್ (ಸಿವಿಲ್) (ಪುರುಷ & ಮಹಿಳಾ) ಹಾಗೂ ಸೇವೆಯಲ್ಲಿರುವವರು (ಮಿಕ್ಕುಳಿದ ವೃಂದದ) ಮತ್ತು ಕಲ್ಯಾಣ–ಕರ್ನಾಟಕ ಪ್ರದೇಶದ (ಸ್ಥಳೀಯ ವೃಂದದ) ಖಾಲಿ ಹುದ್ದೆಗಳ ವಿವರ:**

### ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್)

| ವೃಂದ | 2% ಕ್ರೀಡಾಪಟು ಹುದ್ದೆಗಳು |
|---|---|
| ಎ) ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್) (ಪುರುಷ) (ಮಿಕ್ಕುಳಿದ ವೃಂದ) | 53 |
| ಬಿ) ಮಹಿಳಾ ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್) (ಮಿಕ್ಕುಳಿದ ವೃಂದ) | 17 |
| **ಒಟ್ಟು** | **70** |

### ಕಲ್ಯಾಣ ಕರ್ನಾಟಕ ಮೀಸಲಾತಿಗೊಳಪಡುವ ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್)

| ವೃಂದ | 2% ಕ್ರೀಡಾಪಟು ಹುದ್ದೆಗಳು |
|---|---|
| ಎ) ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್) (ಪುರುಷ) (ಸ್ಥಳೀಯ) | 6 |
| ಬಿ) ಮಹಿಳಾ ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್) (ಸ್ಥಳೀಯ) | 2 |
| ಸಿ) ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್) (ಪುರುಷ) (ಮಿಕ್ಕುಳಿದ ವೃಂದ) | 2 |
| **ಒಟ್ಟು** | **10** |

### ಪೊಲೀಸ್ ಸಬ್–ಇನ್ಸ್‌ಪೆಕ್ಟರ್ (ಸಿವಿಲ್)

| ವೃಂದ | 2% ಕ್ರೀಡಾಪಟು ಹುದ್ದೆಗಳು |
|---|---|
| ಎ) ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಸಿವಿಲ್) (ಪುರುಷ) (ಮಿಕ್ಕುಳಿದ ವೃಂದ) | 11 |
| ಬಿ) ಮಹಿಳಾ ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಸಿವಿಲ್) (ಮಿಕ್ಕುಳಿದ ವೃಂದ) | 03 |
| ಸಿ) ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಸಿವಿಲ್) (ಪುರುಷ) ಸೇವೆಯಲ್ಲಿರುವವರಿಗೆ (ಮಿಕ್ಕುಳಿದ ವೃಂದ) | 02 |
| ಡಿ) ಮಹಿಳಾ ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಸಿವಿಲ್) ಸೇವೆಯಲ್ಲಿರುವವರಿಗೆ (ಮಿಕ್ಕುಳಿದ ವೃಂದ) | 01 |
| **ಒಟ್ಟು** | **17** |

**ಕಲ್ಯಾಣ ಕರ್ನಾಟಕ ಮೀಸಲಾತಿಗೊಳಪಡುವ ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಸಿವಿಲ್)**

| ವೃಂದ | 2% ಕ್ರೀಡಾಪಟು ಹುದ್ದೆಗಳು |
|---|---|
| ಎ) ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಸಿವಿಲ್) (ಪುರುಷ) (ಸ್ಥಳೀಯ) | 02 |
| ಬಿ) ಮಹಿಳಾ ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಸಿವಿಲ್) (ಸ್ಥಳೀಯ) | 01 |
| **ಒಟ್ಟು** | **03** |

**ಟಿಪ್ಪಣಿ:**

**ಮೇಲ್ಕಂಡ ಹುದ್ದೆಗಳಿಗೆ ನೀಡಿರುವ ವರ್ಗೀಕರಣವನ್ನು ಅನುಬಂಧ–'ಎ' ನಲ್ಲಿ ಈ ಅಧಿಸೂಚನೆಯ ಕೊನೆಯಲ್ಲಿ ನೀಡಲಾಗಿರುತ್ತದೆ.**

**4. ಅರ್ಹತಾ ಷರತ್ತುಗಳು:**

a) ಭಾರತೀಯ ನಾಗರಿಕನಾಗಿರತಕ್ಕದ್ದು.

b) ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ, ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.

c) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

d) **"ಪ್ರಶಂಸನೀಯ ಕ್ರೀಡಾಪಟು"** ಎಂದರೆ ಭಾರತೀಯ ನಾಗರಿಕನು ಕ್ರಮ ಸಂಖ್ಯೆ:07ರ Table-1ರಲ್ಲಿ ತಿಳಿಸಲಾಗಿರುವ ಯಾವುದಾದರೂ ಕ್ರೀಡೆಗಳಲ್ಲಿ ನಿರ್ದಿಷ್ಟ ಪಡಿಸಿರುವ ವಲಯ, ರಾಷ್ಟ್ರೀಯ ಅಥವಾ ಅಂತರಾಷ್ಟ್ರೀಯ ಕ್ರೀಡೆಗಳಲ್ಲಿ ಭಾಗವಹಿಸಿ ಕ್ರಮ ಸಂಖ್ಯೆ–08ರ Table-2ರಲ್ಲಿನ ಪದಕಗಳನ್ನು ಪಡೆದಿರಬೇಕು ಹಾಗೂ ಸದರಿ ಕ್ರೀಡೆಗಳಲ್ಲಿನ ಸಾಧನೆಯನ್ನು ಮಾಡುವ ಪೂರ್ವದಲ್ಲಿ ಕನಿಷ್ಠ 05 ವರ್ಷಗಳ ಕಾಲ ಕರ್ನಾಟಕದಲ್ಲಿ ವಾಸವಾಗಿರಬೇಕು.
ಅಲ್ಲದೆ ಪ್ರಶಂಸನಿಯ ಕ್ರೀಡಾಪಟುಗಳು ಒಲಂಪಿಕ್ಸ್ ಅಥವಾ ಏಷಿಯನ್ ಗೇಮ್ಸ್ ಅಥವಾ ಕಾಮನ್‌ವೆಲ್ತ್ ಗೇಮ್ಸ್ ಕ್ರೀಡಾಕೂಟಗಳಲ್ಲಿ ಭಾಗವಹಿಸುವ 05 ವರ್ಷಗಳ ಮೊದಲು ರಾಷ್ಟ್ರೀಯ ಕ್ರೀಡಾಕೂಟಗಳಲ್ಲಿ ಕನಿಷ್ಠ 3ವರ್ಷಗಳ ಕಾಲ ಕರ್ನಾಟಕವನ್ನು ಪ್ರತಿನಿಧಿಸಿರಬೇಕು.

**5. ವಯೋಮಿತಿ :**

**a) ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್) ಹುದ್ದೆಗಳಿಗೆ :-**

ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಂದರೆ 29.09.2021ಕ್ಕೆ ಅಭ್ಯರ್ಥಿಗೆ ಕನಿಷ್ಠ 19 ವರ್ಷ ವಯಸ್ಸಾಗಿರಬೇಕು ಹಾಗೂ ಈ ಕೆಳಕಂಡ ವಯಸ್ಸು ಮೀರಿರಬಾರದು.

i) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ 27 ವರ್ಷಗಳು.

ii) ಇತರೆ ಅಭ್ಯರ್ಥಿಗಳಿಗೆ 25 ವರ್ಷಗಳು.

**b) ಪೊಲೀಸ್ ಸಬ್–ಇನ್ಸ್‌ಪೆಕ್ಟರ್ (ಸಿವಿಲ್) ಹುದ್ದೆಗಳಿಗೆ :-**

ಅರ್ಜಿಯನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಂದರೆ 29.09.2021ಕ್ಕೆ ಅಭ್ಯರ್ಥಿಗೆ ಕನಿಷ್ಠ 21 ವರ್ಷ ವಯಸ್ಸಾಗಿರಬೇಕು. ಈ ಕೆಳಕಂಡ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು.

i) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ 30 ವರ್ಷಗಳು.

ii) ಇತರೆ ಅಭ್ಯರ್ಥಿಗಳಿಗೆ 28 ವರ್ಷಗಳು.

**ಸೇವಾನಿರತ ಅಭ್ಯರ್ಥಿಗಳಿಗೆ:**

ಎ) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ 40 ವರ್ಷಗಳು.

ಬಿ) ಇತರೆ ಅಭ್ಯರ್ಥಿಗಳಿಗೆ 35 ವರ್ಷಗಳು.

* **ಸೇವಾನಿರತ ಅಭ್ಯರ್ಥಿ:**

ಪೊಲೀಸ್ ಇಲಾಖೆಯ ಯಾವುದೇ ವೃಂದದಲ್ಲಿ ಸಹಾಯಕ ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ / ಹೆಡ್ ಕಾನ್ಸ್‌ಟೇಬಲ್ / ಪೊಲೀಸ್ ಕಾನ್ಸ್‌ಟೇಬಲ್ ಆಗಿ ಕನಿಷ್ಠ 5 ವರ್ಷಗಳ ಸೇವೆಯನ್ನು ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ ಅಂದರೆ 29.09.2021 ಕ್ಕೆ ಪೂರ್ಣಗೊಳಿಸಿರಬೇಕು ಹಾಗೂ ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಪೊಲೀಸ್ ಇಲಾಖೆಯಲ್ಲಿನ ಮೇಲ್ಕಂಡ ವೃಂದಗಳಲ್ಲಿ ಸೇವೆ ಸಲ್ಲಿಸುತ್ತಿರಬೇಕು.

**6. ವಿದ್ಯಾರ್ಹತೆ:**

**a) ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್) ಹುದ್ದೆಗಳಿಗೆ :-**

ಕರ್ನಾಟಕ ರಾಜ್ಯ ಪೊಲೀಸ್ ಸೇವೆಗಳು (ಪೊಲೀಸ್ ಕಾನ್ಸ್‌ಟೇಬಲ್, ಪೊಲೀಸ್ ಸಬ್-ಇನ್ಸ್‌ಪೆಕ್ಟರ್ ಮತ್ತು ಉಪ ಪೊಲೀಸ್ ಅಧೀಕ್ಷಕರ ಹುದ್ದೆಗಳಿಗೆ ಪ್ರಶಂಸನೀಯ ಕ್ರೀಡಾಪಟುಗಳ ನೇರ ನೇಮಕಾತಿ) (ವಿಶೇಷ) ನಿಯಮಗಳು, 2020 ರನ್ವಯ ಪಿ.ಯು.ಸಿ., ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಹೊಂದಿರಬೇಕು.

ಸರ್ಕಾರದ ಸುತ್ತೋಲೆ ಸಂಖ್ಯೆ : ಸಿಆಸುಇ 81 ಸೇವನೆ 2017, ದಿನಾಂಕ:27.02.2018 ಮತ್ತು ಸರ್ಕಾರದ ಆದೇಶ ಸಂಖ್ಯೆ: ಇಡಿ 19 ಟಿವಿಇ 2019 ದಿನಾಂಕ: 06.08.2021 ರಲ್ಲಿ ಕರ್ನಾಟಕ ಪದವಿ ಪೂರ್ವ ಶಿಕ್ಷಣ ಮಂಡಳಿಯು ನಡೆಸುವ ಪಿಯುಸಿ ವಿದ್ಯಾರ್ಹತೆಯ ತತ್ಸಮಾನ ವಿದ್ಯಾರ್ಹತೆಗಳು ಈ ಕೆಳಕಂಡಂತಿರುತ್ತದೆ.

1. **ಸಿ.ಬಿ.ಎಸ್.ಇ ಮತ್ತು ಐ.ಎಸ್.ಸಿ ಮಂಡಳಿಯು ನಡೆಸುವ ಕ್ಲಾಸ್ 12 ಪರೀಕ್ಷೆ.**
2. **ಇತರೆ ರಾಜ್ಯ ಸರ್ಕಾರದ ಪರೀಕ್ಷಾ ಮಂಡಳಿಗಳಿಂದ ನಡೆಸುವ ಕ್ಲಾಸ್ 12 ಪರೀಕ್ಷೆ.**
3. **ನ್ಯಾಷನಲ್ ಇನ್ಸ್‌ಟಿಟ್ಯೂಟ್ ಆಫ್ ಓಪನ್ ಸ್ಕೂಲಿಂಗ್(ಎನ್.ಐ.ಓ.ಎಸ್) ವತಿಯಿಂದ ನಡೆಸುವ ಉನ್ನತ ಪ್ರೌಢ ಶಿಕ್ಷಣ ಕೋರ್ಸ್ / ಹೆಚ್.ಎಸ್.ಸಿ.**
4. **ಕರ್ನಾಟಕ ರಾಜ್ಯ ವೃತ್ತಿ ಶಿಕ್ಷಣ ನಿರ್ದೇಶನಾಲಯ ನಡೆಸುವ ಜೆ.ಓ.ಸಿ / ಓ.ಡಿ.ಸಿ / ಜೆ.ಎಲ್.ಡಿ.ಸಿ ಕೋರ್ಸ್‌ಗಳು.**
5. **ಮೂರು ವರ್ಷಗಳ ಡಿಪ್ಲೊಮಾ ಆಥವಾ ಎರಡು ವರ್ಷಗಳ ಐ.ಟಿ.ಐ ಕೋರ್ಸ್ ಅಭ್ಯರ್ಥಿಗಳು ಎನ್.ಐ.ಓ.ಎಸ್‌ನ ವತಿಯಿಂದ ನಡೆಸುವ ಒಂದು ಭಾಷಾ ಕೋರ್ಸ್ ಮತ್ತು ಒಂದು ಶೈಕ್ಷಣಿಕ ವಿಷಯದಲ್ಲಿ (ದೂರಕಲಿಕೆ ಮಾದರಿಯಲ್ಲಿ) ಅಥವಾ ಪದವಿಪೂರ್ವ ಮಂಡಳಿಯು ನಡೆಸುವ ಪರೀಕ್ಷೆಯಲ್ಲಿ ಒಂದು ಭಾಷೆ ಮತ್ತು ಒಂದು ವಿಷಯದಲ್ಲಿ ಉತ್ತೀರ್ಣರಾದಲ್ಲಿ ಮಾತ್ರ ಪಿ.ಯು.ಸಿಗೆ ತತ್ಸಮಾನ.**
6. **ಕರ್ನಾಟಕ ನಾಗರಿಕ ಸೇವೆಗಳ (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ನಿಯಮ5ರ ಉಪ-ನಿಯಮ (5) ರನ್ವಯ ಪ್ರಶಂಸನೀಯ ಕ್ರೀಡಾಪಟು ನಿಗಿದಿಪಡಿಸಿದ ಮೇಲ್ಕಂಡ ಕನಿಷ್ಠ ಶೈಕ್ಷಣಿಕ ಅರ್ಹತೆಯನ್ನು ಹೊಂದಿರದಿದ್ದಲ್ಲಿ ನೇಮಕಾತಿ ಪ್ರಕ್ರಿಯೆಗೆ ಭಾಗವಹಿಸಲು ಅನುಮತಿಸಲಾಗುವುದು. ಸದರಿ ಅಭ್ಯರ್ಥಿಯು ಅರ್ಹ ಮತ್ತು ಸೂಕ್ತ ಎಂದು ಕಂಡಬಂದಲ್ಲಿ ನೇಮಕಾತಿ ಮಾಡಿಕೊಳ್ಳಲಾಗುವುದು. ಹಾಗೂ ಸದರಿ ಅಭ್ಯರ್ಥಿಯು ನಿಗಿದಿಪಡಿಸಿದ ಕನಿಷ್ಠ ಶೈಕ್ಷಣಿಕ ಅರ್ಹತೆಯನ್ನು ಪಡೆಯಲು 5 ವರ್ಷಗಳವರೆಗೆ ಪರೀಕ್ಷಾ ಪೂರ್ವಾವಧಿಯನ್ನು ವಿಸ್ತರಿಸಲಾಗುವುದು, ಸದರಿ ಅವಧಿಯಲ್ಲಿ ಕನಿಷ್ಠ ಶೈಕ್ಷಣಿಕ ಅರ್ಹತೆಯನ್ನು ಪಡೆಯದಿದ್ದಲ್ಲಿ ಅಂತಹ ಆಭ್ಯರ್ಥಿಯು ಸೇವೆಯಿಂದ ಬಿಡುಗಡೆ ಹೊಂದಲು ಹೊಣೆಗಾರರಾಗಿರುತ್ತಾನೆ.**

**b) ಪೊಲೀಸ್ ಸಬ್-ಇನ್ಸ್‌ಪೆಕ್ಟರ್ (ಸಿವಿಲ್) ಹುದ್ದೆಗಳಿಗೆ :-**

ಯು.ಜಿ.ಸಿ. ಇಂದ ಮಾನ್ಯತೆ ಪಡೆದಿರುವ ಅಂಗೀಕೃತ ವಿಶ್ವವಿದ್ಯಾಲಯದಲ್ಲಿ ಪದವಿ ಅಥವಾ ತತ್ಸಮಾನ ಪದವಿಯನ್ನು ನಿಗದಿಪಡಿಸಿರುವ ಕೊನೆಯ ದಿನಾಂಕ, ಅಂದರೆ 29.09.2021 ಕ್ಕೆ ಹೊಂದಿರಬೇಕು.

ಸರ್ಕಾರದ ಸುತ್ತೋಲೆ ಸಂಖ್ಯೆ:ಸಿಆಸುಇ 81 ಸೇವನೆ 2017, ದಿನಾಂಕ: 27.02.2018 ರನ್ವಯ ಪದವಿ ವಿದ್ಯಾರ್ಹತೆಯ ತತ್ಸಮಾನ ವಿದ್ಯಾರ್ಹತೆಗಳನ್ನು ಕೆಳಗಿನಂತೆ ಸ್ಪಷ್ಟಪಡಿಸಲಾಗಿರುತ್ತದೆ.

1) ಯುಜಿಸಿಯಿಂದ ಮಾನ್ಯತೆ ಹೊಂದಿರುವ ಪರಿಗಣಿತ ವಿಶ್ವವಿದ್ಯಾಲಯಗಳು, ಖಾಸಗಿ/ಡೀಮ್ಡ್ ಹಾಗೂ ಹೊರರಾಜ್ಯದ ವಿಶ್ವವಿದ್ಯಾಲಯಗಳಿಂದ ಪಡೆದ ಪದವಿಗಳು. ಆದರೆ ವಿಶ್ವವಿದ್ಯಾಲಯಗಳ ಪದವಿಯ ತತ್ಸಮಾನದ (Equivalence of Degree) ಬಗ್ಗೆ ಶಿಕ್ಷಣಕ್ಕೆ ಸಂಬಂಧಿಸಿದಂತೆ, ಆಯಾ ವಿಶ್ವವಿದ್ಯಾಲಯ ಮತ್ತು ಉದ್ಯೋಗಕ್ಕೆ ಸಂಬಂಧಿಸಿದಂತೆ ಉದ್ಯೋಗ ನೀಡುವ ಪ್ರಾಧಿಕಾರ ತೀರ್ಮಾನ ತೆಗೆದುಕೊಳ್ಳಬೇಕಾಗಿರುತ್ತದೆ.
2) ಅಂಚೆ ಮತ್ತು ದೂರ ಶಿಕ್ಷಣದ ಮುಖಾಂತರ ಪಡೆದಿರುವ ಪದವಿಗಳು. ಆದರೆ, ನಿಯಮಬಾಹಿರವಾಗಿ ಕೆಲವು ವಿಶ್ವವಿದ್ಯಾಲಯಗಳು ಯು.ಜಿ.ಸಿ.ಯ ಅನುಮೋದನೆ ಇಲ್ಲದೆ ನಡೆಸುತ್ತಿರುವ ಅಂಚೆ ಮತ್ತು ದೂರ ಶಿಕ್ಷಣದ ಕೋರ್ಸುಗಳನ್ನು ಹಾಗೂ ಅಂಚೆ ಮತ್ತು ದೂರ ಶಿಕ್ಷಣದ ಮುಖಾಂತರ ಪಡೆದ ತಾಂತ್ರಿಕ ಪದವಿಗಳನ್ನು ನೇಮಕಾತಿಗೆ ಪರಿಗಣಿಸುವಂತಿಲ್ಲ.

**ಟಿಪ್ಪಣಿ :**

ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 69 ಎಸ್‌ಸಿಆರ್ 84 ಬೆಂಗಳೂರು, ದಿನಾಂಕ: 23.09.1985 ರನ್ವಯ 'ಸಿ' ವರ್ಗದ ಹುದ್ದೆಗಳಿಗೆ ಆಯ್ಕೆಯಾದ ಯಾವುದೇ ಅಭ್ಯರ್ಥಿಯು ಸರ್ಕಾರವು ವಿಶೇಷ ಅಥವಾ ಸಾಮಾನ್ಯ ಆದೇಶದಲ್ಲಿ ನಿಗದಿಪಡಿಸುವ ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗದ ಹೊರತು ನೇಮಕ ಹೊಂದಲು ಅರ್ಹನಾಗುವುದಿಲ್ಲ. ಆದ್ದರಿಂದ ಅಂತಿಮ ಆಯ್ಕೆ ಪಟ್ಟಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಎಸ್‌ಎಸ್‌ಎಲ್‌ಸಿ / ಪಿಯುಸಿ / ತತ್ಸಮಾನ

ವಿದ್ಯಾರ್ಹತೆಯ ಪರೀಕ್ಷೆಯಲ್ಲಿ ಕನ್ನಡವನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯಾಗಿ ಅಭ್ಯಸಿಸದಿದ್ದರೆ ಅಂತಹ ಅಭ್ಯರ್ಥಿಗಳು ನೇಮಕಾತಿ ಪ್ರಾಧಿಕಾರ ನಡೆಸುವ ಕನ್ನಡ ಭಾಷಾ ಪರೀಕ್ಷೆಯಲ್ಲಿ ಕಡ್ಡಾಯವಾಗಿ ಉತ್ತೀರ್ಣರಾಗತಕ್ಕದ್ದು.

**7.** ಈ ಕೆಳಗಿನ ಕೋಷ್ಟಕದಲ್ಲಿ ನಮೂದಿಸಿರುವ ವಲಯ, ರಾಷ್ಟ್ರೀಯ ಅಥವಾ ಅಂತರ್‌ರಾಷ್ಟ್ರೀಯ ಕ್ರೀಡೆ ಅಥವಾ ಕ್ರೀಡಾಕೂಟದಲ್ಲಿ ವೈಯಕ್ತಿಕವಾಗಿ ಅಥವಾ ತಂಡದಲ್ಲಿ ಒಬ್ಬ ಸದಸ್ಯನಾಗಿ ಭಾಗವಹಿಸಿರುವ ಅಭ್ಯರ್ಥಿಯನ್ನು ಮಾತ್ರ ಪ್ರಶಂಸನೀಯ ಕ್ರೀಡಾಪಟು ಎಂದು ಪರಿಗಣಿಸಲಾಗುತ್ತದೆ.

TABLE-1

| Sl. No. | Names of the Sports/ Games |
|---|---|
| 1 | Athletics |
| 2 | Archery |
| 3 | Basketball |
| 4 | Boxing |
| 5 | Cycling |
| 6 | Fencing |
| 7 | Football |
| 8 | Gymnastics |
| 9 | Hockey |
| 10 | Handball |
| 11 | Judo |
| 12 | Kabaddi |
| 13 | Shooting(Sports) |
| 14 | Volleyball |
| 15 | Weightlifting |
| 16 | Wrestling |
| 17 | Swimming (Aquatic) |
| 18 | Water sports - Rowing, Kayaking & Kenoying |
| 19 | Tennis |
| 20 | Badminton |

**8. ಅರ್ಹ ಅಭ್ಯರ್ಥಿಗಳ ಪಟ್ಟಿ:**

ಅರ್ಹ ಪ್ರಶಂಸನೀಯ ಕ್ರೀಡಾಪಟು ಅಭ್ಯರ್ಥಿಗಳಿಂದ ಸ್ವೀಕರಿಸಲಾದ ಅರ್ಜಿಗಳನ್ನು ಸಮಿತಿಯು ಈ ಕೆಳಗೆ ನೀಡಲಾದ ಕೋಷ್ಟಕದಲ್ಲಿ (ಟೇಬಲ್) ನಮೂದಿಸಿರುವ ಕ್ರೀಡೆಗಳಿಗೆ ಕಾಲಂ–3ರಲ್ಲಿ ನಮೂದಿಸಿರುವ ಶ್ರೇಣಿ ಅಥವಾ ಕೃಪಾಂಕಗಳ ಆದಾರದ ಮೇಲೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ತಯಾರಿಸಲಾಗುವುದು.

TABLE-2

| Sl. No. | Achievements in the Sports / Games Competitions | Grading or Weightage Marks |
|---|---|---|
| (1) | (2) | (3) |
| 1 | Gold Medal in Olympic Games | 75 |
| 2 | Silver Medal in Olympic Games | 74 |
| 3 | Bronze Medal in Olympic Games | 73 |
| 4 | Gold Medal in World Championship/Cup for Seniors-Grand Slam Tennis | 72 |
| 5 | Silver Medal in World Championship/Cup for Seniors- Grand Slam Tennis | 71 |
| 6 | Bronze Medal in World Championship/Cup for Seniors- Grand Slam Tennis | 70 |
| 7 | Gold Medal in Davis Cup. | 69 |
| 8 | Silver Medal in Davis Cup | 68 |
| 9 | Bronze Medal in -Davis Cup. | 67 |
| 10 | Participation in Olympic Games-World Championship/Cup-Wimbledon-U.S. Open- French Open-Australian Open. | 66 |

| | | |
|---|---|---|
| 11 | Gold Medal in Asian Games-Commonwealth Games | 64 |
| 12 | Silver Medal in Asian Games-Commonwealth Games | 63 |
| 13 | Bronze Medal in Asian Games-Commonwealth Games | 62 |
| 14 | Gold Medal in Commonwealth Championship | 61 |
| 15 | Silver Medal Commonwealth Championship | 60 |
| 16 | Bronze Medal in Commonwealth Championship | 59 |
| 17 | Participation in Asian Games-Commonwealth Games | 58 |
| 18 | Gold Medal in SAF Games-SAARC Championship | 57 |
| 19 | Silver Medal in SAF Games-SAARC Championship | 56 |
| 20 | Bronze Medal in SAF Games-SAARC Championship | 55 |
| 21 | Participation in Commonwealth Championship - Davis Cup. | 54 |
| 22 | Gold Medal in National Championship - National Games. | 53 |
| 23 | Silver Medal in National Championship - National Games. | 52 |
| 24 | Bronze Medal in National Championship - National Games. | 51 |
| 25 | Participation in SAF Games-SAARC Championship | 50 |
| 26 | Participation in National Championship - National Games. | 49 |
| 27 | Gold Medal in South Zone for seniors | 48 |
| 28 | Silver Medal in South Zone for seniors. | 47 |
| 29 | Bronze Medal in South Zone for seniors | 46 |

ಬಿ) ಅರ್ಜಿ ಸಲ್ಲಿಸಿದ ದಿನಾಂಕಕ್ಕೆ ಪ್ರಶಂಸನೀಯ ಕ್ರೀಡಾಪಟುವಿನ ಸಾಧನೆ 10 ವರ್ಷದೊಳಗೆ ಇಲ್ಲದಿದ್ದರೆ ಅಂತಹ ಅಭ್ಯರ್ಥಿಯು ಆಯ್ಕೆಗೆ ಅರ್ಹನಾಗಿರುವುದಿಲ್ಲ, ಒಂದು ಪಕ್ಷ ಒಬ್ಬ ಪ್ರಶಂಸನೀಯ ಕ್ರೀಡಾಪಟು ಒಂದಕ್ಕಿಂತ ಹೆಚ್ಚು ಪದಕಗಳನ್ನು ಗೆದ್ದಿದ್ದಲ್ಲಿ ಅಂತಹ ಪದಕಗಳಲ್ಲಿ ಅತ್ಯುನ್ನತ ಪದಕವನ್ನು ಉಪ ನಿಯಮ (3) ರನ್ವಯ ಶ್ರೇಣಿ ಅಥವಾ ಕೃಪಾಂಕಗಳ ಆದಾರದ ಮೇಲೆ ಪರಿಗಣಿಸಲಾಗುವುದು.

Definitions.- (1) In these rules unless the context otherwise requires,-

a) “Asian Games or Asaid” means the games organized by the Olympic Council of Asia having its Headquarters at Kuwait or any other place declared as such by it and recognized by the International Olympic Committee;
b) “Commonwealth Games” means the quadrennial games organized by the Commonwealth Games Federation, an international organization, having its Headquarters at London, England, United Kingdom or any other place declared as such by it;
c) “Davis Cup” means the annual international team event in men’s tennis organized by the International Tennis Federation (ITF), having its headquarters at London, England, United Kingdom;
d) “Meritorious Sportsperson” means a citizen of India who has participated in any of the sports or games listed in the table in sub-rule (2) of rule 4 and won medals in the zonal, national or international events as specified in the table in sub-rule (3) of rule 4 and domiciled in Karnataka for at least five years prior to his achievement in such events. Provided that, in the case of a meritorious sportsperson, who has participated in Olympics or Asian Games or Commonwealth Games, he must have represented Karnataka for at least three years in the national level tournaments during the five years immediately preceding his participation in Olympic or Asian Games or Commonwealth Games.
e) “National Championship” means the annual championship organized by the respective sports associations affiliated to the Indian Olympic Association;
f) “National Games” means the quadrennial National Games organized by the Indian Olympic Association;
g) “Olympic Games/Olympiad" means the summer Olympic Games organized by the international Olympic Committee having its headquarters at Lausanne, Switzerland

or any other place declared as such by it and does not include winter Olympic Games or any other Olympic Games.

h) "Police Service" includes service under police (civil), wireless, City Armed Reserve, District Armed Reserve, Karnataka State Reserve Police and Karnataka Industrial Security Force.

i) "SAARC Championship or South Asian Federation Games" means the biennial multi-sport event organized by South Asian Olympic Council having its headquarters at Kathmandu, Nepal;

j) "South Zone for Seniors" means the annual championship organized among the South Indian States by the respective sports associations for persons above 19 years affiliated to the Indian Olympic Association;

**9. ತರಬೇತಿ, ಖಾಯಂಪೂರ್ವ ಅವಧಿ ಮತ್ತು ವೇತನ ಶ್ರೇಣಿ :**

**a)** **ತರಬೇತಿ:**
ನೇಮಕಾತಿ ಹೊಂದಿದ ಅಭ್ಯರ್ಥಿಗಳು ನಿಯಮಿತ ಕ್ರೀಡಾ ಚಟುವಟಿಕೆಗಳ ಜೊತೆಗೆ ಡಿಜಿ ಮತ್ತು ಐಜಿಪಿ ರವರಿಂದ ಅನುಮೋದಿಸುವಂತೆ ವಿಶೇಷ ತರಬೇತಿ ಕಾರ್ಯಕ್ರಮವನ್ನು ಪಡೆಯತಕ್ಕದ್ದು.

**b)** **ಖಾಯಂಪೂರ್ವ ಅವಧಿ:**
ಮೂಲ ತರಬೇತಿ ಮತ್ತು ಪ್ರಾಯೋಗಿಕ ತರಬೇತಿ ಸೇರಿದಂತೆ ಎರಡು ವರ್ಷ ಆರು ತಿಂಗಳು.

**c)** **ವೇತನ ಶ್ರೇಣಿ:**

**i) ಪೊಲೀಸ್ ಕಾನ್ಸ್‌ಟೇಬಲ್(ಸಿವಿಲ್) ಹುದ್ದೆಗಳಿಗೆ :-**
₹.23500-550-24600-600-27000-650-29600-750-32600-850-36000-950-39800-1100-46400-1250- 47650

**ii) ಪೊಲೀಸ್ ಸಬ್-ಇನ್ಸ್‌ಪೆಕ್ಟರ್ (ಸಿವಿಲ್) ಹುದ್ದೆಗಳಿಗೆ**
₹.37900-950-39800-1100-46400-1250-53900-1450-65600-1650-70850

**d)** **ಪಿಂಚಣಿ ಸೌಲಭ್ಯ:**
ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ(ಎಸ್‌ಪಿಎಲ್) 04 ಪಿಇಟಿ 2005, ದಿನಾಂಕ:31.03.2006 ರಂತೆ ನೂತನ ಅಂಶದಾಯಿ ಪಿಂಚಣಿ ಸೌಲಭ್ಯ ಅನ್ವಯವಾಗುವುದು.

**10. ಕ್ರೀಡೆಗಳಲ್ಲಿ ಸಾಧನೆ ಅಥವಾ ಅನ್ವಯವಾಗುವ ಕ್ರೀಡೆಗಳು**

a) **ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್) ಹುದ್ದೆಗಳಿಗೆ :** ಟೇಬಲ್-2ರಲ್ಲಿನ ಕಾಲಂ(3) ರಲ್ಲಿರುವಂತೆ 46 ಅಂಕ ಅಥವಾ ಹೆಚ್ಚು ಅಂಕಗಳನ್ನು ಹೊಂದಿರಬೇಕು.

b) **ಪೊಲೀಸ್ ಸಬ್-ಇನ್ಸ್‌ಪೆಕ್ಟರ್ (ಸಿವಿಲ್) ಹುದ್ದೆಗಳಿಗೆ:** ಟೇಬಲ್-2ರಲ್ಲಿನ ಕಾಲಂ(3) ರಲ್ಲಿರುವಂತೆ 50 ಅಂಕ ಅಥವಾ ಹೆಚ್ಚು ಅಂಕಗಳನ್ನು ಹೊಂದಿರಬೇಕು.

**11. ಕನಿಷ್ಠ ದೈಹಿಕ ಮಾನದಂಡಗಳು: ಪೊಲೀಸ್ ಕಾನ್ಸ್‌ಟೇಬಲ್ ಮತ್ತು ಪೊಲೀಸ್ ಸಬ್-ಇನ್ಸ್‌ಪೆಕ್ಟರ್ (ಸಿವಿಲ್) ಹುದ್ದೆಗಳಿಗೆ**

**a)** ಎತ್ತರ

i) ಪುರುಷ : 155 ಸೆಂ.ಮೀ

ii) ಮಹಿಳೆ : 150 ಸೆಂ.ಮೀ

**b)** ಎದೆ ಸುತ್ತಳತೆ (ಪುರುಷರಿಗೆ ಮಾತ್ರ): 81 ಸೆಂ.ಮೀ. ಸಾಮಾನ್ಯ, ವಿಸ್ತರಣೆ 5 ಸೆಂ.ಮೀ.)

**c)** ತೂಕ (ಮಹಿಳೆಯರಿಗೆ ಮಾತ್ರ): 45 ಕೆ.ಜಿ.

ಅಭ್ಯರ್ಥಿಗಳು ದೇಹದಾರ್ಢ್ಯತೆ ಪರೀಕ್ಷೆಗೆ ಹಾಜರಾಗುವಾಗ, ಈ ಕೆಳಕಂಡ ಯಾವುದಾದರೊಂದು ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು ಮತ್ತು ಅದರ ಒಂದು ದೃಢೀಕೃತ ಪ್ರತಿಯನ್ನು ನೀಡುವುದು.

i) ಪಾಸ್‌ಪೋರ್ಟ್ (Passport)

ii) ಚಾಲನಾ ಪರವಾನಗಿ ಪತ್ರ (Driving License)

iii) ಪ್ಯಾನ್ ಕಾರ್ಡ್ (PAN Card)

iv) ರಾಜ್ಯ ಸರ್ಕಾರ/ ಕೇಂದ್ರ ಸರ್ಕಾರ / ಸಾರ್ವಜನಿಕ ಸ್ವಾಮ್ಯದ ಅಥವಾ ಸರ್ಕಾರದ ಅಧೀನಕ್ಕೊಳಪಟ್ಟ ಖಾಸಗೀ ಕಂಪನಿಗಳು ವಿತರಿಸಿರುವ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿ (Service ID Card)

v) ಸಾರ್ವಜನಿಕ ಬ್ಯಾಂಕುಗಳು / ಅಂಚೆ ಕಛೇರಿಗಳು ವಿತರಿಸಿರುವ ಭಾವಚಿತ್ರವಿರುವ ಪಾಸ್ ಪುಸ್ತಕ (Bank Pass Book with Photograph)

vi) ಭಾವಚಿತ್ರ ಸಮೇತ ನೋಂದಣಿಯಾಗಿರುವ ಸ್ವತ್ತಿನ ದಾಖಲೆಪತ್ರ ಅಥವಾ ಪಟ್ಟಾ ಪುಸ್ತಕ (Pattas and registered deeds with Photograph)

vii) ಭಾವಚಿತ್ರ ಸಮೇತ ಸಂಬಂಧಪಟ್ಟ ಪ್ರಾಧಿಕಾರಿಯವರು ವಿತರಿಸಿರುವ ಜಾತಿ ಪ್ರಮಾಣ ಪತ್ರ (Community Certificate with Photo)

viii) ಮಾಜಿ ಸೈನಿಕ ಅಭ್ಯರ್ಥಿಗಳಿಗೆ ವಿತರಿಸಿರುವ ಪಿಂಚಣಿ ಪುಸ್ತಕ / ಪಿಂಚಣಿ ಮಂಜೂರಾತಿ ಆಗಿರುವ ಆದೇಶ (Ex-servicemen's pension book/pension payment order)

ix) ಎನ್.ಆರ್.ಇ.ಜಿ.ಎಸ್.ಯಿಂದ ನೀಡಿದ ಭಾವಚಿತ್ರವಿರುವ ಉದ್ಯೋಗ ಚೀಟಿ. (Job cards with Photograph)

x) ಎಲೆಕ್ಟೋರಲ್ ಫೋಟೋ ಗುರುತಿನ ಚೀಟಿ (EPIC).

xi) ಭಾರತೀಯ ಗುರುತು ಪ್ರಾಧಿಕಾರದಿಂದ ನೀಡಲಾಗಿರುವ ಆಧಾರ್ ಕಾರ್ಡ್(AADHAR CARD).

ಕರೆಪತ್ರದ ಜೊತೆಗೆ ಆನ್‌ಲೈನ್ ಅರ್ಜಿಯ ಜೆರಾಕ್ಸ್ ಪ್ರತಿಯನ್ನು ಸಹ ತರತಕ್ಕದ್ದು, ತಪ್ಪಿದ್ದಲ್ಲಿ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲ. ನಿಗದಿತ ದಿನಾಂಕ ಹಾಗೂ ಸಮಯದಲ್ಲಿ ಹಾಜರಾಗದಿದ್ದರೆ ಅಂತಹವರನ್ನು ಅನರ್ಹ ಗೊಳಿಸಲಾಗುವುದು ಹಾಗೂ ಬದಲಿ ದಿನಾಂಕವನ್ನು ನೀಡಲಾಗುವುದಿಲ್ಲ.

**12. <u>ಅಭ್ಯರ್ಥಿಗಳ ಆಯ್ಕೆ ಪಟ್ಟಿ:</u>**

ಟೇಬಲ್-2ರಲ್ಲಿನ ಕಾಲಂ(3) ರಲ್ಲಿರುವಂತೆ ಅಭ್ಯರ್ಥಿಗಳು ಗಳಿಸಿದ ಶ್ರೇಣಿ ಅಥವಾ ಕೃಪಾಂಕಗಳೊಂದಿಗೆ ಗಳಿಸಿರುವ ಅಂಕಗಳನುಸಾರ ನೇಮಕಾತಿಗೆ ಸೂಕ್ತವಾಗಿರುವ ಅಭ್ಯರ್ಥಿಗಳ ಅರ್ಹತಾ ಪಟ್ಟಿಯ ಆದಾರದ ಮೇಲೆ ಜಾಹಿರಾತಿನಲ್ಲಿ ಪ್ರಕಟಿಸಲಾಗಿರುವ ಹುದ್ದೆಗಳ ಸಂಖ್ಯೆಗೆ ಅನುಗುಣವಾಗಿ ಆಯ್ಕೆಪಟ್ಟಿಯನ್ನು ತಯಾರಿಸಲಾಗುವುದು.

ಸಮಿತಿಯಿಂದ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಇಲಾಖೆಯ ಅಧಿಕೃತ ವೆಬ್‌ಸೈಟ್‌ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗುವುದು. ಸದರಿ ಆಯ್ಕೆ ಪಟ್ಟಿಗೆ ಸಂಬಂಧಿಸಿದಂತೆ, ಅಭ್ಯರ್ಥಿಯು ಯಾವುದಾದರು ಆಕ್ಷೇಪಣೆಯನ್ನು ಸಲ್ಲಿಸಬೇಕಾದಲ್ಲಿ ಆಯ್ಕೆ ಪಟ್ಟಿಯನ್ನು ಪ್ರಕಟಿಸಿದ 15 ದಿನಗಳ ಒಳಗಾಗಿ ಸಮಿತಯ ಸದಸ್ಯ ಕಾರ್ಯದರ್ಶಿಗಳಿಗೆ ವಿಳಾಸಿಸಿ ಸಲ್ಲಿಸತಕ್ಕದ್ದು,

**ಟಿಪ್ಪಣಿ:** ತಾತ್ಕಾಲಿಕ ಅರ್ಹತಾ ಪಟ್ಟಿಯಲ್ಲಿ ಹೆಸರನ್ನು ಒಳಗೊಂಡಿರುವ ಅಭ್ಯರ್ಥಿಗಳು ಸಹಿಷ್ಣುತೆ ಪರೀಕ್ಷೆಗೆ ಹಾಜರಾಗುವ ಅವಶ್ಯಕತೆ ಇರುವುದಿಲ್ಲ.

**13. <u>ವೈದ್ಯಕೀಯ ಪರೀಕ್ಷೆ</u> :**

ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಿದ ನಂತರ ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಅರ್ಹಗೊಳ್ಳುವ ಎಲ್ಲಾ ಅಭ್ಯರ್ಥಿಗಳು ವೈದ್ಯಕೀಯ ಮಂಡಳಿಯ ಮುಂದೆ ವೈದ್ಯಕೀಯ ಪರೀಕ್ಷೆಗೆ ಹಾಜರಾಗತಕ್ಕದ್ದು, ವೈದ್ಯಕೀಯ ಪರೀಕ್ಷೆಯ ಸಮಯ ಮತ್ತು ಸ್ಥಳವನ್ನು ಸಮಿತಿಯು ನಿಗದಿಪಡಿಸುವುದು. ಜಿಲ್ಲಾ ಸರ್ಜನ್‌ಗಿಂತ ಕಡಿಮೆ ಇಲ್ಲದ ಶ್ರೇಣಿಯ ಅಧಿಕಾರಿಯ ನೇತೃತ್ವದಲ್ಲಿ ವೈದ್ಯಕೀಯ ಮಂಡಳಿ ಇರತಕ್ಕದ್ದು. ವೈದ್ಯಕೀಯ ಮಂಡಳಿಯು ನೀಡುವ ವೈದ್ಯಕೀಯ ಪರೀಕ್ಷೆಯ ವರದಿಯು ಅಂತಿಮವಾಗಿರುತ್ತದೆ. ಎರಡನೇ ಅಭಿಪ್ರಾಯಕ್ಕೆ ಅವಕಾಶವಿರುವುದಿಲ್ಲ. ವೈದ್ಯಕೀಯ ಮಂಡಳಿಯು ನೀಡುವ ವೈದ್ಯಕೀಯ ಪರೀಕ್ಷೆಯ ವರದಿಯಲ್ಲಿ ಅನರ್ಹನಾದ ಅಭ್ಯರ್ಥಿಯ ಹೆಸರನ್ನು ತಾತ್ಕಾಲಿಕ ಅರ್ಹತಾ ಪಟ್ಟಿಯಿಂದ ತೆಗೆದುಹಾಕಲಾಗುವುದು.

**ವೈದ್ಯಕೀಯ ಪರೀಕ್ಷೆಗಳು ಈ ಕೆಳಕಂಡಂತಿರುತ್ತವೆ :**

**a) <u>ದೃಷ್ಟಿ:</u>**

ಕನ್ನಡಕ ಸಹಿತ ಅಥವಾ ಕನ್ನಡಕವಿಲ್ಲದೇ ಕೆಳಗೆ ಕಾಣಿಸಿದ ದರ್ಜೆಯ ಸಮೀಪ ಮತ್ತು ದೂರದ ದೃಷ್ಟಿ ಹೊಂದಿರಬೇಕು.

| | | ಉತ್ತಮ | | ಕನಿಷ್ಠ |
|---|---|---|---|---|
| i) | *ದೂರ ದೃಷ್ಟಿ* | 6/9<br>6/9 | ಅಥವಾ | 6/9<br>6/12 |
| ii) | ಸಮೀಪ ದೃಷ್ಟಿ | 0/6 | | 0/8 |

ಪ್ರತಿ ಕಣ್ಣು ಸಂಪೂರ್ಣ ಕ್ಷೇತ್ರ ದೃಷ್ಟಿ ಹೊಂದಿರಬೇಕು. ವರ್ಣಾಂಧತೆ, ಮೆಳ್ಳಗಣ್ಣು ಅಥವಾ ಯಾವುದೇ ಕಣ್ಣಿನ ಅಥವಾ ರೆಪ್ಪೆಯ ವಿಕೃತ ಸ್ಥಿತಿಯನ್ನು ಅನರ್ಹತೆಯೆಂದು ಪರಿಗಣಿಸಲಾಗುವುದು.

**b) ಶ್ರವಣ ಶಕ್ತಿ:**

i) ರಿನ್ನೇಸ್ ಪರೀಕ್ಷೆ (Rinne's Test) ii) ವೆಬ್ಬರ್ ಪರೀಕ್ಷೆ (Weber's Test)

iii) ವೆರ್ಟಿಗೋ ಪರೀಕ್ಷೆ (Tests for Vertigo)

ಮೇಲಿನ ಪರೀಕ್ಷೆಗಳಲ್ಲಿ ಯಾವುದೇ ನ್ಯೂನತೆಗಳು ಕಂಡು ಬಂದಲ್ಲಿ ಅನರ್ಹತೆ ಎಂದು ಪರಿಗಣಿಸಲಾಗುವುದು.

**c)** ಅಪಧಮನಿ ಊತ ಸಹ ಅನರ್ಹತೆ (Varicose Veins)

**d)** ಮಾತಿನಲ್ಲಿ ಅಡಚಣೆ ಸಹ ಅನರ್ಹತೆ (Impediment in speech)

**e)** ಎದೆಯ ಕ್ಷ–ಕಿರಣ (Chest X-Ray) ವನ್ನು ಪರೀಕ್ಷೆಗೆ ತೆಗೆದುಕೊಳ್ಳಲಾಗುವುದು.

ಮೇಲಿನ ಎಲ್ಲಾ ಪರೀಕ್ಷೆಗಳನ್ನು ವೈದ್ಯಕೀಯ ಮಂಡಳಿಯು ನಡೆಸುತ್ತದೆ. ಸದರಿ ಮಂಡಳಿಯು ದೈಹಿಕವಾಗಿ ಅರ್ಹರೆಂದು ಪ್ರಮಾಣೀಕರಿಸಿದ ಅಭ್ಯರ್ಥಿಗಳು ಮಾತ್ರ ನೇಮಕಾತಿಗೆ ಅರ್ಹಗೊಳ್ಳುವರು.

**ಟಿಪ್ಪಣಿ:** ವೈದ್ಯಕೀಯ ಪರೀಕ್ಷೆಗಳಿಗೆ ಹಾಜರಾಗುವ ಅಭ್ಯರ್ಥಿಗಳಿಗೆ ಯಾವುದೇ ಭತ್ಯೆಯನ್ನು ನೀಡಲಾಗುವುದಿಲ್ಲ.

**14. ಅಂತಿಮ ಆಯ್ಕೆ ಪಟ್ಟಿ :**

ತಾತ್ಕಾಲಿಕ ಆಯ್ಕೆ ಪಟ್ಟಿಗೆ ಸಂಬಂಧಿಸಿದಂತೆ ಸ್ವೀಕರಿಸಲಾದ ಆಕ್ಷೇಪಣೆಗಳನ್ನು ಸಮಿತಿಯು ಪರಿಗಣನೆಗೆ ತೆಗೆದುಕೊಂಡು ಅಧಿಸೂಚನೆಯಲ್ಲಿ ಪ್ರಕಟಿಸಲಾಗಿರುವ ಖಾಲಿ ಹುದ್ದೆಗಳ ಸಂಖ್ಯೆಗೆ ಸಮನಾಗಿ ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗುವುದು. ಆಯ್ಕೆಯಾದ ಅಭ್ಯರ್ಥಿಗಳ ನೈಜತೆ / ಸತ್ಯತೆಯ ಪರಿಶೀಲನೆಯ ಸಲುವಾಗಿ ಅಂತಿಮ ಆಯ್ಕೆ ಪಟ್ಟಿಯನ್ನು ನೇಮಕಾತಿ ಪ್ರಾಧಿಕಾರಕ್ಕೆ ಕಳುಹಿಸಲಾಗುವುದು.

**15. ಅಭ್ಯರ್ಥಿಗಳ ನೇಮಕಾತಿ:**

ಅಂತಿಮ ಆಯ್ಕೆ ಪಟ್ಟಿಯಲ್ಲಿ ಹೆಸರನ್ನು ಒಳಗೊಂಡ ಒಂದೇ ಕಾರಣದಿಂದ ಅಭ್ಯರ್ಥಿಯು ನೇಮಕಾತಿಯ ಹಕ್ಕನ್ನು ಹೊಂದಿರುವುದಿಲ್ಲ. ಸರ್ಕಾರಿ ಸೇವೆಗೆ ನೇಮಕಾತಿ ಹೊಂದಲು ಎಲ್ಲಾ ರೀತಿಯಿಂದ ಉತ್ತಮ ನಡತೆ ಮತ್ತು ನೇಮಕಾತಿಗೆ ಸೂಕ್ತವೆಂದು ಕಂಡಬರದ ಹೊರತು ಅಂತಿಮ ಆಯ್ಕೆ ಪಟ್ಟಿಯಲ್ಲಿ ಹೆಸರನ್ನು ಒಳಗೊಂಡಿದ್ದರೂ ಸಹ ನೇಮಕಾತಿಯನ್ನು ನೀಡುವಂತಿಲ್ಲ. ಅಫಿಡೆವಿಟ್ ಮತ್ತು ಪ್ರಮಾಣ ಪತ್ರಗಳಲ್ಲಿನ ಅಂಶಗಳ ನಿಖರತೆ / ನೈಜತೆಯನ್ನು ನೇಮಕಾತಿ ಪ್ರಾಧಿಕಾರವು ಪರಿಶೀಲಿಸತಕ್ಕದ್ದು, ಅಫಿಡೆವಿಟ್ ಮತ್ತು ಪ್ರಮಾಣ ಪತ್ರಗಳಲ್ಲಿನ ಅಂಶಗಳು ಸುಳ್ಳೆಂದು ಕಂಡುಬಂದಲ್ಲಿ ಅಂತಹ ಅಭ್ಯರ್ಥಿಯ ಹೆಸರನ್ನು ಅಂತಿಮ ಆಯ್ಕೆ ಪಟ್ಟಿಯಿಂದ ತೆಗೆದುಹಾಕಲಾಗುವುದು, ಸದರಿ ವಿಷಯಕ್ಕೆ ಸಂಬಂಧಿಸಿದಂತೆ, ನೇಮಕಾತಿ ಪ್ರಾಧಿಕಾರದ ತೀರ್ಮಾನವೇ ಅಂತಿಮವಾಗಿರುತ್ತದೆ.

**16. ಜಾತಿ ಮೀಸಲಾತಿ ಪ್ರಮಾಣ ಪತ್ರಗಳು :**

ಜಾತಿ ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು ಈ ಕೆಳಕಂಡ ನಮೂನೆಗಳಲ್ಲಿ ಪ್ರಮಾಣ ಪತ್ರವನ್ನು ದಿನಾಂಕ: 29.09.2021 ರೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು.

a) ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ತಹಶಿಲ್ದಾರ್ ರವರಿಂದ ಪಡೆದ ನಮೂನೆ–ಡಿ ಪ್ರಮಾಣ ಪತ್ರ.

b) ಪ್ರವರ್ಗ – 1 ವರ್ಗದ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ತಹಶೀಲ್ದಾರ್ ರವರಿಂದ ಪಡೆದ ನಮೂನೆ–ಇ ಪ್ರಮಾಣ ಪತ್ರ.

c) ಪ್ರವರ್ಗ– 2ಎ, 2ಬಿ, 3ಎ, 3ಬಿ ವರ್ಗದ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ತಹಶೀಲ್ದಾರ್ ರವರಿಂದ ಪಡೆದ ನಮೂನೆ – ಎಫ್ ಪ್ರಮಾಣ ಪತ್ರ.

**ಸೂಚನೆ** : ನಮೂನೆ – ಎಫ್ ಪ್ರಮಾಣ ಪತ್ರವು ನಿಗದಿಪಡಿಸಿದ ಕೊನೆಯ ದಿನಾಂಕ: 29.09.2021ಕ್ಕೆ ಐದು ವರ್ಷಕ್ಕಿಂತ ಹಳೆಯದಾಗಿರಬಾರದು.

**17. ಕಲ್ಯಾಣ–ಕರ್ನಾಟಕ ಮೀಸಲಾತಿಯ ಸಲುವಾಗಿ ಪಡೆಯಬೇಕಾಗಿರುವ ಪ್ರಮಾಣ ಪತ್ರ:**

ನೇರ ನೇಮಕಾತಿಯಲ್ಲಿ ಸ್ಥಳೀಯ ವ್ಯಕ್ತಿಯೆಂಬ ಮೀಸಲಾತಿಯನ್ನು ಕ್ಲೇಮು ಮಾಡುವ ಅರ್ಜಿದಾರರು ಒಂದು ಸ್ವಯಂ ಘೋಷಿತ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು. ಪರಂತು ಅರ್ಜಿ ಸಲ್ಲಿಸುವ ದಿನಾಂಕದಂದು ಅರ್ಜಿದಾರರು ಸ್ಥಳೀಯ ವ್ಯಕ್ತಿಯೆಂದು ಅರ್ಹತೆ ಪಡೆಯುವುದು ಕಡ್ಡಾಯವಾಗಿರುತ್ತದೆ. ತಾತ್ಕಾಲಿಕವಾಗಿ ಆಯ್ಕೆಗೊಂಡ ಅಭ್ಯರ್ಥಿಗಳು ದಾಖಲಾತಿ ಪರೀಕ್ಷೆಗಳ ಸಮಯದಲ್ಲಿ ಸಕ್ಷಮ ಪ್ರಾಧಿಕಾರದಿಂದ ನೀಡಲಾದ ಅರ್ಹತಾ ಪ್ರಮಾಣ ಪತ್ರ (ಅನುಬಂಧ–ಎ) ನೀಡತಕ್ಕದ್ದು. ಅರ್ಹತಾ ಪ್ರಮಾಣ ಪತ್ರದಲ್ಲಿ ಸಕ್ಷಮ ಪ್ರಾಧಿಕಾರಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಲಾದ ಅಂತಿಮ ದಿನಾಂಕದಂದು ಅಭ್ಯರ್ಥಿಯು ಸಾರ್ವಜನಿಕ ಉದ್ಯೋಗ ಆದೇಶದಂತೆ ಸ್ಥಳೀಯ ವ್ಯಕ್ತಿಯೆಂದು ಅರ್ಹತೆ ಪಡೆದಿರುತ್ತಾನೆಂದು ಒಂದು ಅಡಿ ಟಿಪ್ಪಣಿಯನ್ನು ದಾಖಲಿಸುವುದು.

**<u>ಸೂಚನೆ:</u>–**

a) ಅರ್ಹತಾ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಪಡೆದಿಟ್ಟುಕೊಂಡಿರತಕ್ಕದ್ದು.

b) ಕಲ್ಯಾಣ–ಕರ್ನಾಟಕ ಮೀಸಲಾತಿಗೆ ಸಂಬಂಧಿಸಿದಂತೆ ಪ್ರಮಾಣ ಪತ್ರಗಳ ನಮೂನೆಗಳನ್ನು ಅಧಿಸೂಚನೆಯ ಕೊನೆಯಲ್ಲಿ ನೀಡಲಾಗಿರುತ್ತದೆ.

c) ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವುದರಿಂದ ಯಾವುದೇ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಲಗತ್ತಿಸಲು ಅವಕಾಶ ಇರುವುದಿಲ್ಲ, ಆದರೆ ಪ್ರಮಾಣ ಪತ್ರಗಳನ್ನು / ದಾಖಲೆಗಳನ್ನು ಪಡೆದಿರಬೇಕು ಇಲ್ಲವೇ ಸಿಂಧುವಾಗಿರಬೇಕು ಹಾಗೂ ನೇಮಕಾತಿ ಸಮಿತಿಯು ಪರಿಶೀಲನೆಗಾಗಿ ಹಾಜರುಪಡಿಸಲು ಸೂಚಿಸಿದಾಗ ಅರ್ಜಿಯಲ್ಲಿ ನಮೂದಿಸಿರುವ ಮೀಸಲಾತಿಯ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದ್ದಲ್ಲಿ ಕೆಳಕಂಡ ಕ್ರಮ ಕೈಗೊಳ್ಳಲಾಗುವುದು.

**<u>ವಿಶೇಷ ಸೂಚನೆ:</u> ಅಧಿಸೂಚನೆಯ ವರ್ಗೀಕರಣದಲ್ಲಿ ಪ್ರಕಟಿಸಲಾಗಿರುವ ಪ್ರವರ್ಗಗಳನುಸಾರ ಅರ್ಹ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸಿ ಆಯಾ ಪ್ರವರ್ಗಗಳನುಸಾರ ಆಯ್ಕೆ ಮಾಡಲಾಗುವುದು. ಒಂದು ವೇಳೆ ಸಂಬಂಧಪಟ್ಟ ಪ್ರವರ್ಗದ ಅಭ್ಯರ್ಥಿಗಳು ಆಯ್ಕೆಗೆ ಲಭ್ಯವಿಲ್ಲದಿದ್ದಲ್ಲಿ ಅಂತಹ ಪ್ರವರ್ಗದ ಹುದ್ದೆಯನ್ನು ಮುಂದಿನ ನೇಮಕಾತಿಗೆ ಕೊಂಡೊಯ್ಯಲಾಗುವುದು.**

**18. <u>ಪ್ರಮುಖವಾದ ಸೂಚನೆಗಳು :</u>**

ಅಭ್ಯರ್ಥಿಗಳು ಯಾವುದೇ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಲಗತ್ತಿಸಕೂಡದು. ಆದರೆ ಈ ಕೆಳಕಂಡ ಪ್ರಮಾಣ ಪತ್ರಗಳನ್ನು ಪಡೆದಿಟ್ಟುಕೊಂಡಿದ್ದು, ಸಮಿತಿಯು ಸೂಚಿಸಿದಾಗ ಹಾಜರುಪಡಿಸತಕ್ಕದ್ದು.

a) ವಿದ್ಯಾರ್ಹತೆಯ ಅಂಕಪಟ್ಟಿ.

b) ಹುಟ್ಟಿದ ದಿನಾಂಕದ ಪ್ರಮಾಣ ಪತ್ರ (ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪ್ರಮಾಣ ಪತ್ರ)

c) ಸರ್ಕಾರಿ ಇಲಾಖೆಯಲ್ಲಿ/ರಾಜ್ಯಸರ್ಕಾರದ/ಕೇಂದ್ರ ಸರ್ಕಾರದ/ಸರ್ಕಾರದ ಯಾವುದೇ ಪ್ರಾಧಿಕಾರದಲ್ಲಿ/ರಾಜ್ಯ ಅಥವಾ ಕೇಂದ್ರ ಸರ್ಕಾರದ ಸಾರ್ವಜನಿಕ ಸ್ವಾಮ್ಯದ ಕಂಪನಿಗಳಲ್ಲಿ ಪ್ರಸ್ತುತ ಉದ್ಯೋಗಿಯಾಗಿದ್ದಲ್ಲಿ ಅಂತಹವರು ಇಲಾಖಾ ವತಿಯಿಂದ ಕರ್ತವ್ಯದಿಂದ ಬಿಡುಗಡೆ ಮಾಡುವ ಬಗ್ಗೆ ಇಚ್ಛಾ ಅನುಮತಿ ಪತ್ರ.

d) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, 2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿ ಅಭ್ಯರ್ಥಿಗಳು ನಮೂನೆ ಡಿ/ಇ/ಎಫ್ ನಲ್ಲಿ ತಹಶೀಲ್ದಾರ್‌ರಿಂದ ಪಡೆದ ಪ್ರಮಾಣ ಪತ್ರಗಳನ್ನು ಪಡೆದಿಟ್ಟುಕೊಂಡಿರತಕ್ಕದ್ದು.

e) ಕಲ್ಯಾಣ–ಕರ್ನಾಟಕ ಮೀಸಲಾತಿ ಕೋರುವ ಅಭ್ಯರ್ಥಿಗಳು ಸಕ್ಷಮ ಪ್ರಾಧಿಕಾರ ರವರು ನೀಡಿರುವ ಅರ್ಹತಾ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.

f) ಸೇವೆಯಲ್ಲಿರುವ ಎಎಸ್‌ಐ / ಹೆಚ್‌ಸಿ / ಪಿಸಿ ರವರುಗಳು ಅಧಿಸೂಚನೆಯಲ್ಲಿ ನೀಡಲಾಗಿರುವ ಅನುಬಂಧ–'ಎ' & 'ಬಿ' ಗಳನ್ನು ಪಡೆದಿಟ್ಟುಕೊಂಡಿರತಕ್ಕದ್ದು.
ಅಭ್ಯರ್ಥಿಯು ಅರ್ಜಿಯಲ್ಲಿ ಭರ್ತಿ ಮಾಡಿದ ಮಾಹಿತಿಯು ಅಂತಿಮವಾಗಿರುತ್ತದೆ. ಆದ್ದರಿಂದ ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವಾಗ ಅರ್ಜಿಯ ಎಲ್ಲಾ ಕಾಲಂಗಳನ್ನು ಸರಿಯಾಗಿ ಭರ್ತಿ ಮಾಡತಕ್ಕದ್ದು. ಭರ್ತಿ ಮಾಡಿ ಸಲ್ಲಿಸಿದಂತಹ ಅರ್ಜಿಯಲ್ಲಿನ ಅಂಶ/ಮಾಹಿತಿಗಳನ್ನು ಯಾವುದೇ ಸಂದರ್ಭದಲ್ಲಿ ಬದಲಾವಣೆ ಮಾಡಲಾಗುವುದಿಲ್ಲ.

g) ನೇಮಕಾತಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ ವಿಳಾಸ ಬದಲಾವಣೆಯಾಗಿದ್ದಲ್ಲಿ ತಕ್ಷಣದಲ್ಲಿ ಅಭ್ಯರ್ಥಿಗಳು ಲಿಖಿತ ಮೂಲಕ ಸಂಬಂಧಪಟ್ಟ ಘಟಕಾಧಿಕಾರಿ ರವರ ನೇಮಕಾತಿ ಸಮಿತಿಯ ಗಮನಕ್ಕೆ ತರತಕ್ಕದ್ದು. ಈ ವಿಳಾಸ ಬದಲಾವಣೆಯನ್ನು ಪರಿಗಣಿಸಲು ನೇಮಕಾತಿ ಸಮಿತಿಯು ಪ್ರಯತ್ನಿಸುವುದು. ಆದಾಗ್ಯೂ ಈ ವಿಚಾರದಲ್ಲಿ ನೇಮಕಾತಿ ಸಮಿತಿಯು ಯಾವುದೇ ಜವಾಬ್ದಾರಿಯನ್ನು ವಹಿಸಿಕೊಳ್ಳುವುದಿಲ್ಲ. ಈ ಬಗ್ಗೆ ಅಭ್ಯರ್ಥಿಗಳು ಎಚ್ಚರ ವಹಿಸತಕ್ಕದ್ದು.

h) ಅಭ್ಯರ್ಥಿಗಳು ನೇಮಕಾತಿ ಸಮಿತಿಯೊಡನೆ ಸಂಪರ್ಕಿಸಬೇಕಾದ ಸಂದರ್ಭದಲ್ಲಿ ಅವರ ಮನವಿಯೊಂದಿಗೆ ಅರ್ಜಿಯ ನಕಲು ಪ್ರತಿಯನ್ನು ಹಾಗೂ ಇತರೆ ಮಾಹಿತಿಯನ್ನು ನೀಡತಕ್ಕದ್ದು.

i) ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವಾಗ ಯಾವುದೇ ಸುಳ್ಳು / ತಪ್ಪು ಮಾಹಿತಿಗಳನ್ನು ನೀಡಬಾರದು. ಹಾಗೇ ನೀಡಿ ತದನಂತರ ನೇಮಕಾತಿ ಸಮಿತಿಗೆ ಅದು ಪತ್ತೆಯಾದಲ್ಲಿ ಅಂತಹ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ರದ್ದು ಪಡಿಸಲಾಗುವುದು.

j) ಅರ್ಜಿದಾರರು ಯಾವುದೇ ಕ್ರಿಮಿನಲ್ ಮೊಕದ್ದಮೆಯಲ್ಲಿ ಶಿಕ್ಷೆಗೆ ಗುರಿಯಾಗಿರಬಾರದು. ಕ್ರಿಮಿನಲ್ ಮೊಕದ್ದಮೆಯಲ್ಲಿ ಭಾಗಿಯಾಗಿ ಬಿಡುಗಡೆ / ಖುಲಾಸೆಯಾಗಿದ್ದಲ್ಲಿ ನೇಮಕಾತಿ ಪ್ರಾಧಿಕಾರವು ತೆಗೆದುಕೊಳ್ಳುವ ತೀರ್ಮಾನವೇ ಅಂತಿಮವಾಗಿರುತ್ತದೆ.

**19. ವಿಶೇಷ ಸೂಚನೆಗಳು :**

ಅಭ್ಯರ್ಥಿಗಳು ನೇಮಕಾತಿ ಸಮಿತಿಯು ನಿಗದಿಪಡಿಸಿದ ಅರ್ಜಿ ನಮೂನೆಯಲ್ಲಿಯೇ ಎಲ್ಲಾ ಅಂಕಣಗಳನ್ನು ಸ್ಪಷ್ಟವಾಗಿ ಭರ್ತಿ ಮಾಡತಕ್ಕದ್ದು. ಇತರೆ ಯಾವುದೇ ನಮೂನೆಗಳಲ್ಲಿ ಸಲ್ಲಿಸುವ, ಶುಲ್ಕ ಪಾವತಿಸದೆ ಸಲ್ಲಿಸಲ್ಪಡುವ, ಅಪೂರ್ಣವಾಗಿರುವ, ಸಹಿ ಮಾಡದ ಹಾಗೂ ಭಾವಚಿತ್ರ ಇಲ್ಲದೆ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು ಹಾಗೂ ಈ ಕೆಳಕಂಡ ವಿಶೇಷ ಸೂಚನೆಗಳನ್ನು ಗಮನಿಸುವುದು.

a) ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಸಲ್ಲಿಸಿದ ಅರ್ಜಿಯ ಪ್ರತಿಯನ್ನು ತಮ್ಮೊಂದಿಗೆ ತಪ್ಪದೇ ಇಟ್ಟುಕೊಳ್ಳಲು ಸೂಚಿಸಿದೆ.

b) ಸೇವೆಯಲ್ಲಿರುವ ಅಭ್ಯರ್ಥಿಗಳು ಅವರು ಸೇವೆಯಲ್ಲಿರುವ ಬಗ್ಗೆ ಅರ್ಜಿಯಲ್ಲಿನ ನಿಗದಿತ ಕಾಲಂನ್ನು ತುಂಬತಕ್ಕದ್ದು ಹಾಗೂ ಅವರ ಸೇವಾ ಪ್ರಮಾಣ ಪತ್ರ ಮತ್ತು ಸದರಿ ಹುದ್ದೆಗೆ ಅರ್ಜಿ ಸಲ್ಲಿಸುವ ಬಗ್ಗೆ ನಿರಾಕ್ಷೇಪಣ ಪ್ರಮಾಣ ಪತ್ರವನ್ನು (No Objection Certificate) ಸಂಬಂಧಿತ ಇಲಾಖಾ ಮುಖ್ಯಸ್ಥರಿಂದ ಪಡೆದಿಟ್ಟುಕೊಂಡಿದ್ದು ನೇಮಕಾತಿ ಸಮಿತಿಯು ಸೂಚಿಸಿದಾಗ ಹಾಜರುಪಡಿಸತಕ್ಕದ್ದು.

c) **ಅಭ್ಯರ್ಥಿಗಳು ಒಂದು ಹುದ್ದೆಗೆ ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಬಾರದೆಂದು ಸಲಹೆ ನೀಡಲಾಗಿದೆ. ಅಭ್ಯರ್ಥಿಗಳು ಒಂದು ಹುದ್ದೆಗೆ ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸುವ ಬದಲು ಒಂದೇ ಅರ್ಜಿಯನ್ನು ಅತೀ ಜಾಗರೂಕತೆಯಿಂದ ಮತ್ತು ಬಹಳ ಎಚ್ಚರಿಕೆಯಿಂದ ಭರ್ತಿ ಮಾಡತಕ್ಕದ್ದು, ಏಕೆಂದರೆ ಒಂದಕ್ಕಿಂತ ಹೆಚ್ಚು ನೋಂದಣಿ ಸಂಖ್ಯೆಯಲ್ಲಿ ಪರೀಕ್ಷೆಗೆ ಹಾಜರಾಗಿದ್ದು ಯಾವುದೇ ಹಂತದಲ್ಲಿ ಕಂಡುಬಂದಲ್ಲಿ ಅಂತಹ ಅಭ್ಯರ್ಥಿತನವನ್ನು ರದ್ದುಪಡಿಸಲಾಗುವುದು. ಸಂಕ್ಷಿಪ್ತವಾಗಿ ತಿಳಿಸುವುದೇನೆಂದರೆ ಒಬ್ಬ ಅಭ್ಯರ್ಥಿಯು ಒಂದು ನೋಂದಣಿ ಸಂಖ್ಯೆಗಿಂತ ಹೆಚ್ಚು ನೋಂದಣಿ ಸಂಖ್ಯೆಯನ್ನು ಪರೀಕ್ಷೆಯ ಯಾವುದೇ ಹಂತದಲ್ಲಿ ಬಳಸುವುದನ್ನು ನಿಖರವಾಗಿ ನಿಷೇಧಿಸಲಾಗಿದೆ. ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಒಂದೇ ಹೆಸರಿನಲ್ಲಿ ಸಲ್ಲಿಸಿ ಬೇರೆ ಬೇರೆ ಫೋಟೋಗಳನ್ನು ಅಂಟಿಸಿ, ಸಹಿಗಳನ್ನು ಮಾಡಿ ಪರೀಕ್ಷೆಗೆ ಹಾಜರಾಗಿದ್ದು ಕಂಡುಬಂದಲ್ಲಿ ಅಂತಹವರ ಎಲ್ಲಾ ಅರ್ಜಿಗಳನ್ನು ತಿರಸ್ಕರಿಸುವುದಲ್ಲದೇ ಅವರ ಮೇಲೆ ಕಾನೂನಿನ ರೀತ್ಯಾ ಕ್ರಮವನ್ನು ಕೈಗೊಳ್ಳಲಾಗುವುದು. ಈ ವಿಚಾರದಲ್ಲಿ ನೇಮಕಾತಿ ಸಮಿತಿಯ ತೀರ್ಮಾನವೇ ಅಂತಿಮವಾಗಿರುತ್ತದೆ.**

d) **ಅರ್ಜಿಯೊಂದಿಗೆ ಯಾವುದೇ ಮೂಲ ಪ್ರಮಾಣ ಪತ್ರಗಳನ್ನು ಹಾಗೂ ಪ್ರತಿಗಳನ್ನು ಸಲ್ಲಿಸುವ ಅಗತ್ಯವಿರುವುದಿಲ್ಲ.** ಒಂದು ವೇಳೆ ಸಲ್ಲಿಸಿ, ಅವು ಕಳೆದು ಹೋದರೆ ನೇಮಕಾತಿ ಸಮಿತಿಯು ಜವಾಬ್ದಾರಿಯಾಗುವುದಿಲ್ಲ.

e) ಅಭ್ಯರ್ಥಿಗಳು ಅರ್ಜಿಯಲ್ಲಿ ತಪ್ಪು ಅಥವಾ ಸುಳ್ಳು ಮಾಹಿತಿ ನೀಡಿದ್ದಲ್ಲಿ ಅದಕ್ಕೆ ಅಭ್ಯರ್ಥಿಗಳೇ ಜವಾಬ್ದಾರರಾಗಿರುತ್ತಾರೆ. ಅರ್ಜಿಯಲ್ಲಿನ ವಿವರಗಳು ಸರಿಯಾಗಿವೆಯೇ ಎಂದು ಮನಗಂಡು ಆ ನಂತರ ಮೂಲ ಅರ್ಜಿಯನ್ನು ಭರ್ತಿ ಮಾಡುವುದು ಸೂಕ್ತ. ಅಭ್ಯರ್ಥಿಗಳು ಶೈಕ್ಷಣಿಕ ವಿದ್ಯಾರ್ಹತೆಯಲ್ಲಿ ಗಳಿಸಿದ ಅಂಕಗಳನ್ನು ಸರಿಯಾಗಿ ನಮೂದಿಸತಕ್ಕದ್ದು.

f) ಒಂದು ವೇಳೆ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ / ಬಂದ್ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೆಯ ಕೆಲಸದ ದಿನದಂದು ಅರ್ಜಿಗಳನ್ನು ಸ್ವೀಕರಿಸಲಾಗುವುದು. ಆದರೆ ವಯೋಮಿತಿ ಹಾಗೂ ಕನಿಷ್ಠ ಶೈಕ್ಷಣಿಕ ವಿದ್ಯಾರ್ಹತೆಯ ಪರಿಗಣನೆಗೆ ದಿನಾಂಕ:29.09.2021 ಮಾತ್ರ ಅನ್ವಯವಾಗುತ್ತದೆ.

g) ಅಭ್ಯರ್ಥಿಯು ಅರ್ಜಿಯನ್ನು ಸಮರ್ಪಕವಾಗಿ ತುಂಬದೇ ಸದರಿ ಅರ್ಜಿ ತಿರಸ್ಕೃತವಾದಲ್ಲಿ ತತ್ಸಂಬಂಧ ಯಾವುದೇ ರೀತಿಯ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.

h) ಅರ್ಜಿ ತುಂಬುವ ವಿಧಾನ ಹಾಗೂ ಹೆಚ್ಚಿನ ವಿವರಗಳು ಪೊಲೀಸ್ ಇಲಾಖೆಯ ಅಧಿಕೃತ ವೆಬ್‌ಸೈಟ್ www.recruitment.ksp.gov.in ನಲ್ಲಿನ ಮಾಹಿತಿ ಸೂಚಿಯಲ್ಲಿ ಲಭ್ಯವಿರುತ್ತದೆ.

i) ಅಭ್ಯರ್ಥಿಗಳು ತಮ್ಮ ಅರ್ಜಿಗಳಲ್ಲಿ ನೀಡುವ ಮಾಹಿತಿಗಳು ಸರಿ ಇದೆ ಎಂದು ಭಾವಿಸಿ ಅವರುಗಳು ಸ್ಪರ್ಧಾತ್ಮಕ ಪರೀಕ್ಷೆಯನ್ನು ಬರೆಯಲು ಅರ್ಹರೆ ಎಂಬುದನ್ನು ಪರಿಗಣಿಸಿ ಅರ್ಹರೆಂದು ಕಂಡುಬಂದ ಅಭ್ಯರ್ಥಿಗಳಿಗೆ ಮಾತ್ರ ಪ್ರವೇಶ ಪತ್ರಗಳನ್ನು ತಯಾರು (Upload) ಮಾಡಲಾಗುತ್ತದೆ. ಆದ್ದರಿಂದ ನಿಗದಿಪಡಿಸಿರುವ ವಯೋಮಿತಿ, ವಿದ್ಯಾರ್ಹತೆ, ಮೀಸಲಾತಿ ಇತ್ಯಾದಿಗಳಿಗೆ ಅನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ. ಪೂರ್ಣ ಮಾಹಿತಿ ನೀಡದ ಅಥವಾ ತಪ್ಪು ಮಾಹಿತಿ ನೀಡಿದ, ಶುಲ್ಕ ಪಾವತಿಸದ, ಅಭ್ಯರ್ಥಿಯ ಸಹಿ ಇಲ್ಲದಮತ್ತು ಭಾವಚಿತ್ರ ಇಲ್ಲದೆ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

j) ಕರ್ನಾಟಕ ರಾಜ್ಯದ, ಕೇಂದ್ರ ಸರ್ಕಾರದ ಯಾವುದೇ ಸರ್ಕಾರಿ ಹಾಗೂ ಅರೆ ಸರ್ಕಾರಿ ಸಂಸ್ಥೆಯ ಸೇವೆಯಿಂದ ವಜಾಗೊಂಡಿರುವ ನೌಕರರು ನೇಮಕಾತಿಗೆ ಅರ್ಹರಲ್ಲ.

k) ಸುಳ್ಳು ಮಾಹಿತಿ ಅಥವಾ ನಕಲಿ ಪ್ರಮಾಣ ಪತ್ರ / ದಾಖಲೆಗಳನ್ನು ಸಲ್ಲಿಸಿ ನೌಕರಿ ಪಡೆಯುವುದು/ಪಡೆದಿರುವುದು ಯಾವುದೇ ಸಂದರ್ಭದಲ್ಲಿ ಕಂಡು ಬಂದಲ್ಲಿ, ಅದೇ ಹಂತದಲ್ಲಿ ಅವರನ್ನು ಯಾವುದೇ ಮುನ್ಸೂಚನೆ ನೀಡದೆ ಅವರ ಅಭ್ಯರ್ಥಿತನವನ್ನು ರದ್ದುಗೊಳಿಸುವುದರ ಜೊತೆಗೆ ಅವರ ವಿರುದ್ಧ ಕಾನೂನು ರೀತಿಯ ಕ್ರಮ ತೆಗೆದುಕೊಳ್ಳಲಾಗುವುದು.

l) ಅಭ್ಯರ್ಥಿಯು ಹುದ್ದೆಗೆ ಅರ್ಜಿ ಸಲ್ಲಿಸಿದ ತಕ್ಷಣ ತಾನು ನಿಯಮ ಮತ್ತು ವಿನಿಯಮಗಳಿಗೆ (Rules & Regulations) ಬದ್ಧನಾಗಿರುತ್ತಾನೆ ಎಂದು ಭಾವಿಸಲಾಗಿರುತ್ತದೆ. ಒಂದು ವೇಳೆ ತಾನು ಸದರಿ ಹುದ್ದೆಗೆ ಆಯ್ಕೆಯಾಗದ ಪಕ್ಷದಲ್ಲಿ ತದನಂತರ ಅದೇ ನಿಯಮಗಳನ್ನು ಪ್ರಶ್ನಿಸಲು ಬರುವುದಿಲ್ಲ.

m) ಕೆ.ಸಿ.ಎಸ್. (ಸಾಮಾನ್ಯ ನೇಮಕಾತಿ) ನಿಯಮಗಳು 1977 ಹಾಗೂ ಸದರಿ ನಿಯಮಕ್ಕೆ ಆಗಿರುವ ತಿದ್ದುಪಡಿ ಹಾಗೂ ವೃಂದ ಮತ್ತು ನೇಮಕಾತಿ (ತಿದ್ದುಪಡಿ) ನಿಯಮ 2009ರಲ್ಲಿ ನಿರ್ದಿಷ್ಟಗೊಳಿಸಿರುವಂತೆ ಆಯ್ಕೆಯಾದ ಅಭ್ಯರ್ಥಿಯು ನೇಮಕಾತಿ ಆದೇಶ ನೀಡುವ ಮುನ್ನ ಪೂರ್ಣ ಪ್ರಮಾಣದ ವೈದ್ಯಕೀಯ ಪರೀಕ್ಷೆಗೆ ಒಳಗಾಗಬೇಕಾಗುತ್ತದೆ. ನಿಯಮದಲ್ಲಿ ನಿಗದಿಪಡಿಸಿರುವ ವೈದ್ಯಕೀಯ ಪರೀಕ್ಷೆಯಲ್ಲಿ ವಿಫಲರಾದ ಅಭ್ಯರ್ಥಿಗಳನ್ನು ಅನರ್ಹ ಗೊಳಿಸಲಾಗುವುದು ಹಾಗೂ ಇತರೆ ಯಾವುದೇ ವೈದ್ಯಕೀಯ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ.

n) **ದುರ್ನಡತೆ** : ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆ ಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಪರೀಕ್ಷಾ ಕೊಠಡಿಯಲ್ಲಿ ದುರ್ವರ್ತಿಸುತ್ತಿರುವನೆಂದು, ತಪ್ಪಿತಸ್ಥನೆಂದು ಕಂಡುಬಂದಲ್ಲಿ ಅಥವಾ ಒಂದು ಕೇಂದ್ರದಲ್ಲಿ ದೈಹಿಕ ಪರೀಕ್ಷೆಗಳಿಗೆ ಹಾಜರಾಗಿರುವ ವಿಷಯವನ್ನು ಮರೆಮಾಚಿ ಮತ್ತೊಂದು ಕೇಂದ್ರದಲ್ಲಿ ದೈಹಿಕ ಪರೀಕ್ಷೆಗೆ ಹಾಜರಾದರೆ ಹಾಗೂ ನೇಮಕಾತಿ ಸಮಿತಿಯಿಂದ ನೀಡಲಾದ ಯಾವುದೇ ಸೂಚನೆಗಳ್ನು ಉಲ್ಲಂಘಿಸುತ್ತಿರುವನೆಂದು ಅಥವಾ ಅವನು ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅಭ್ಯರ್ಥಿಯು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ; ನೇಮಕಾತಿ ಸಮಿತಿ ನಡೆಸುವ ಯಾವುದೇ ಪರೀಕ್ಷೆಗೆ ಪ್ರವೇಶ ಪಡೆಯುವುದರಿಂದ ಅಥವಾ ಯಾವುದೇ ಹುದ್ದೆಯ ಆಯ್ಕೆಗೆ ಖಾಯಂ ಆಗಿ ಡಿಬಾರ್ ಮಾಡಲಾಗುವುದು.

o) ಅಭ್ಯರ್ಥಿಗಳು ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್) ಮತ್ತು ಪೊಲೀಸ್ ಸಬ್–ಇನ್ಸ್‌ಪೆಕ್ಟರ್ (ಸಿವಿಲ್) (ಪುರುಷ & ಮಹಿಳಾ) 2021 ನೇಮಕಾತಿ ಸಹಾಯವಾಣಿ ಸಂಖ್ಯೆ. 080–22943346ನ್ನು ಸಂಪರ್ಕಿಸಿ ನೇಮಕಾತಿಗೆ ಸಂಬಂಧಿಸಿದ ಪ್ರಶ್ನೆಗಳನ್ನು ಸ್ಪಷ್ಟಪಡಿಸಿಕೊಳ್ಳಬಹುದು. ಈ ಸಹಾಯವಾಣಿ ದಿನಾಂಕ: 31.08.2021 ರಿಂದ ಪ್ರತಿದಿನ ಬೆಳಿಗ್ಗೆ 10–00 ರಿಂದ ಸಾಯಂಕಾಲ 6–00 ಗಂಟೆಯವರೆಗೆ ಲಭ್ಯವಿರುತ್ತದೆ. ಅಲ್ಲದೆ ಮೇಲಿಂದ ಮೇಲೆ ನೇಮಕಾತಿಗೆ ಸಂಬಂಧಪಟ್ಟಂತೆ ಬರುವ ಸಾಮಾನ್ಯ ಪ್ರಶ್ನೆಗಳಿಗೆ (Frequenty Asked Questions-FAQ) ಉತ್ತರವನ್ನು www.recruitment.ksp.gov.in ಪೊಲೀಸ್ ವೆಬ್‌ಸೈಟ್‌ನಲ್ಲಿ ನೋಡಬಹುದು.

ಅಡಿಷನಲ್ ಡೈರೆಕ್ಟರ್ ಜನರಲ್ ಆಫ್ ಪೊಲೀಸ್,
ನೇಮಕಾತಿ ಹಾಗೂ ಅಧ್ಯಕ್ಷರು,
ಪೊಲೀಸ್ ಕಾನ್ಸ್‌ಟೇಬಲ್(ಸಿವಿಲ್) ಮತ್ತು
ಪೊಲೀಸ್ ಸಬ್ ಇನ್ಸ್‌ಪೆಕ್ಟರ್ (ಸಿವಿಲ್) ನೇಮಕಾತಿ ಸಮಿತಿ,
ಕಾರ್ಲ್‌ಟನ್ ಭವನ, ಅರಮನೆ ರಸ್ತೆ,
ಬೆಂಗಳೂರು–560 001.

**(ಪ.ಜಾ/ಪ.ಪಂ ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ – ಡಿ**

(ನಿಯಮ 3ಎ (2) (3) ನೋಡಿ)

**ಅನುಸೂಚಿತ ಜಾತಿ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ (ಪ.ಜಾ /ಪ.ಪಂ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರಗಳ ನಮೂನೆ**

**ಪ್ರಮಾಣ ಪತ್ರ**

................................................................ ರಾಜ್ಯದ / ಕೇಂದ್ರಾಡಳಿತ ಪ್ರದೇಶದ * .............................. ಜಿಲ್ಲೆಯ/ ವಿಭಾಗದ ............................................ ಗ್ರಾಮ / ಪಟ್ಟಣದ * ನಿವಾಸಿಯಾದ ಶ್ರೀ / ಶ್ರೀಮತಿ .............. ಎಂಬುವವರ ಮಗ / ಮಗಳಾದ ಶ್ರೀ / ಶ್ರೀಮತಿ ................................................ ಇವರು ಅನುಸೂಚಿತ ಜಾತಿ / ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ / ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

* ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950
* ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950
* ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950
* ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1951

(ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬಯಿ ರಾಜ್ಯ ಪುನರ್ ರಚನಾ ಅಧಿ ನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ, 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅಧಿನಿಯಮ, 1971ರ ಮೂಲಕ ತಿದ್ದುಪಡಿಯಾದಂತೆ).

* ಸಂವಿಧಾನ
* ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ, 1956
* ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ, 1976ರ ಮೂಲಕ ತಿದ್ದುಪಡಿಯಾದಂತೆ ಸಂವಿದಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಆದೇಶ, 1959.
* ಸಂವಿಧಾನ (ದಾದರ್ ಮತ್ತು ನಗರ ಹವೇಲಿ) ಅನುಸೂಚಿತ ಜಾತಿಗಳ ಆದೇಶ, 1962
* ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964
* ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ) ಆದೇಶ, 1967
* ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತ ಜಾತಿ / ಬುಡಕಟ್ಟುಗಳ ಆದೇಶ 1988
* ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ

2. ಶ್ರೀ / ಶ್ರೀಮತಿ / ಕುಮಾರಿ* ...................................................................................................................... ಮತ್ತು / ಅಥವಾ ಅವನ* / ಅವಳ* ಕುಟುಂಬವು ........................................................................ ರಾಜ್ಯ / ಕೇಂದ್ರಾಡಳಿತ ಪ್ರದೇಶದ ........................................ ಜಿಲ್ಲಾ / ವಿಭಾಗದ .......................... ಗ್ರಾಮ / ಪಟ್ಟಣದ ಸಾಮಾನ್ಯ ನಿವಾಸಿ (ಗಳು)

ಸಹಿ ..................................................

ತಹಶೀಲ್ದಾರರು ..................................................

ಸ್ಥಳ : ಪದನಾಮ

ದಿನಾಂಕ : ಕಛೇರಿಯ ಮೊಹರಿನೊಂದಿಗೆ

**ರಾಜ್ಯ / ಕೇಂದ್ರಾಡಳಿತ ಪ್ರದೇಶ***

**ಅನ್ವಯವಾಗದಿರುವ ಪದಗಳನ್ನು ದಯವಿಟ್ಟು ಬಿಟ್ಟು ಬಿಡಿ / ಹೊಡೆದು ಹಾಕಿ**

ಸೂಚನೆ : ಇಲ್ಲಿ ಉಪಯೋಗಿಸಿದ "ಸಾಮಾನ್ಯ ನಿವಾಸಿಗಳೂ" ಎಂಬ ಪದಾವಳಿಯು ಪ್ರಜಾ ಪ್ರಾತಿನಿಧ್ಯ ಅಧಿನಿಯಮ, 1950ರ 20ನೇ ಪ್ರಕರಣದಲ್ಲಿರುವ ಅರ್ಥವನ್ನೇ ಹೊಂದಿರುತ್ತದೆ.

ಭಾರತ ಸರ್ಕಾರದ ಪತ್ರ ಸಂಖ್ಯೆ. ಬಿಸಿ 12028 / 2/ 76–ಎಸ್‌ಸಿಟಿ–1 ಗೃಹ ಮಂತ್ರಾಲಯದ ಅನುಸಾರವಾಗಿ, ಅಂಥ ಪ್ರಮಾಣ ಪತ್ರಗಳನ್ನು ನೀಡಲು ಸಕ್ಷಮವಾಗಿರುವುದಕ್ಕಾಗಿ, ಭಾರತ ಸರ್ಕಾರದ (ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ) ಪತ್ರ ಸಂಖ್ಯೆ 13.02.74 ಇಎಸ್‌ಟಿ (ಎಸ್‌ಸಿಟಿ) ದಿನಾಂಕ 5ನೇ ಆಗಸ್ಟ್ 1975ರಲ್ಲಿ ನಮೂದಿಸಿದ ಪ್ರಾಧಿಕಾರಿಯು, ರಾಷ್ಟ್ರಪತಿಗಳು ಸಂಬಂಧಪಟ್ಟ ಆದೇಶದ ಅಧಿಸೂಚನೆಯನ್ನು ಹೊರಡಿಸಿದ ಸಮಯದಲ್ಲಿ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದ ವ್ಯಕ್ತಿಯು, ತನ್ನ ಖಾಯಂ ವಾಸ ಸ್ಥಳವನ್ನು ಹೊಂದಿದ್ದ ಸ್ಥಳಕ್ಕೆ ಸೇರಿದವರೊಬ್ಬರಾಗಿರತಕ್ಕದ್ದು. ಅದೇ ರೀತಿಯಲ್ಲಿ, ಒಂದು ತಾಲ್ಲೂಕಿನ ರೆವಿನ್ಯೂ ಪ್ರಾಧಿಕಾರಿಯು ಇನ್ನೊಂದು ತಾಲ್ಲೂಕಿಗೆ ಸೇರಿದ ವ್ಯಕ್ತಿಗಳಿಗೆ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ನೀಡಲು ಸಕ್ಷಮ ಪ್ರಾಧಿಕಾರಿಯಾಗುವುದಿಲ್ಲ.

**(ಪ್ರವರ್ಗ – 1ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ – ಇ**

(ನಿಯಮ 3ಎ (2) (3) ನೋಡಿ)

**ಹಿಂದುಳಿದ ವರ್ಗಗಳಿಗೆ (ಪ್ರ.ವರ್ಗ–1) ಸೇರಿದ ಅಭ್ಯರ್ಥಿಗೆ ನೀಡುವ ಪ್ರಮಾಣ ಪತ್ರ**

.................................................................................................................. ಗ್ರಾಮ / ಪಟ್ಟಣದ / ನಗರ ನಿವಾಸಿಯಾದ ಶ್ರೀ / ಶ್ರೀಮತಿ .................................................................................................. ಇವರ ಮಗ / ಮಗಳು / ಪತ್ನಿ / ಪತಿಯಾದ ಶ್ರೀ / ಶ್ರೀಮತಿ ...................................................................................... ಇವರು ಹಿಂದುಳಿದ ವರ್ಗಗಳ (ಪ್ರವರ್ಗ) ............................................................. ಜಾತಿಯ ........................................ ಉಪ ಜಾತಿಗೆ ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ : ತಹಶೀಲ್ದಾರರು

ದಿನಾಂಕ : ............................

ತಾಲ್ಲೂಕು

ಕಛೇರಿಯ ಮೊಹರು

**(ಪ್ರವರ್ಗ – 2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ – ಎಫ್**

(ನಿಯಮ 3ಎ (2) (3)ನ್ನು ನೋಡಿ)

**ಹಿಂದುಳಿದ ವರ್ಗಗಳಿಗೆ (2ಎ, 2ಬಿ, 3ಎ, 3ಬಿ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಆದಾಯ ಮತ್ತು ಜಾತಿ ಪ್ರಮಾಣ ಪತ್ರ**

............................................................ ರಲ್ಲಿ ವಾಸವಾಗಿರುವ ಶ್ರೀ / ಶ್ರೀಮತಿ ................................................ ಇವರ ಮಗ / ಮಗಳು / ಪತಿ / ಪತ್ನಿಯಾದ ಶ್ರೀ/ಶ್ರೀಮತಿ/ಕುಮಾರಿ ....................................... ಇವರು ಮತ್ತು ಆತನ / ಅವಳ ತಂದೆ / ತಾಯಿ / ಪೋಷಕರು/ಪತ್ನಿ/ಪತಿಯು, ಸರ್ಕಾರಿ ಆದೇಶಗಳ ಸಂಖ್ಯೆ. ಎಸ್‌ಡಬ್ಲ್ಯೂಡಿ 225 ಬಿಸಿಎ 2000, ದಿನಾಂಕ 30.03.2002ರಲ್ಲಿ ನಿರ್ದಿಷ್ಟ ಪಡಿಸಿದ ಮೇಲುಸ್ತರದ (ಕ್ರಿಮಿ ಲೇಯರ್) ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು ;

ಅಭ್ಯರ್ಥಿಯಾಗಲಿ ಅಥವಾ ಆತನ / ಆಕೆಯ ತಂದೆ ತಾಯಿ/ಪೋಷಕರಾಗಲಿ / ಪತ್ನಿ / ಪತಿಯಾಗಲಿ, ಸರ್ಕಾರದ ಸೇವೆಯಲ್ಲಿ 1ನೇ ದರ್ಜೆಯ ಅಥವಾ 2ನೇ ದರ್ಜೆಯ ಅಧಿಕಾರಿಯಾಗಿಲ್ಲವೆಂದು ;

ಅಥವಾ

ಸಾರ್ವಜನಿಕ ವಲಯ ಉದ್ಯಮದಲ್ಲಿ ತತ್ಸಮಾನವಾದ ಹುದ್ದೆಯನ್ನು ಹೊಂದಿರುವುದಿಲ್ಲ ;

ಅಥವಾ

ಖಾಸಗಿ ನಿಯೋಜಕರ ಕೈಕೆಳಗೆ, 2ನೇ ದರ್ಜೆಯ ಅಧಿಕಾರಿಯ ಸಂಬಳಕ್ಕಿಂತ (ವೇತನ ಶ್ರೇಣಿ ರೂ. 43100–83900/– ಪ್ರಾರಂಬಿಕ ಹಂತ) ಕಡಿಮೆಯಲ್ಲದ ಸಂಬಳವನ್ನು ಪಡೆಯುವ ನೌಕರನಾಗಿಲ್ಲವೆಂದು

ಅಥವಾ

ಆತನ/ಆಕೆಯ ತಂದೆ ತಾಯಿ/ಪೋಷಕರು/ಪತ್ನಿ/ಪತಿಯ ಆದಾಯವು ಎಂಟು ಲಕ್ಷ ಮೀರುವುದಿಲ್ಲವೆಂದು ;

ಅಥವಾ

ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961ರಲ್ಲಿ ನಿಗದಿಪಡಿಸಿರುವಂತೆ ಆತನ/ಆಕೆಯ ತಂದೆ ತಾಯಿ/ಪೋಷಕರು/ಪತ್ನಿ/ಪತಿಯು ಮಾರಾಟ ತೆರಿಗೆದಾರನಲ್ಲ ಅಥವಾ ಆತನ/ಆಕೆಯ ತಂದೆ ತಾಯಿ/ಪೋಷಕ/ಪತ್ನಿ/ಪತಿಯು ಅಥವಾ ಇವರಿಬ್ಬರೂ 10 ಯುನಿಟ್‌ಗಿಂತ ಹೆಚ್ಚಿನ ಕೃಷಿ ಭೂಮಿ ಅಥವಾ 25 ಎಕರೆಗಳಿಗಿಂತ ಹೆಚ್ಚಿನ ಪ್ಲಾಂಟೇಶನ್ ಭೂಮಿಯನ್ನು ಹೊಂದಿರುವುದಿಲ್ಲವೆಂದು ಪ್ರಮಾಣಿಕರಿಸಲಾಗಿದೆ. ಸರ್ಕಾರಿ ಆದೇಶ ಸಂಖ್ಯೆ. ಎಸ್‌ಡಬ್ಲ್ಯೂಡಿ 225 ಬಿಸಿಎ 2000, ದಿನಾಂಕ 30.03.2002ರ ಅನ್ವಯ ಶ್ರೀ/ಶ್ರೀಮತಿ/ಕುಮಾರಿ .................................. ಇವರು ...................................... ಜಾತಿಗೆ ........................................ ಸೇರಿದ ಉಪಜಾತಿಯವರಾಗಿದ್ದು ಸರ್ಕಾರಿ ಆದೇಶ ಸಂಖ್ಯೆ. ಎಸ್‌ಡಬ್ಲ್ಯೂಡಿ 225 ಬಿಸಿಎ 2000, ದಿನಾಂಕ 30.03.2002ರ ಅನ್ವಯ ಹಿಂದುಳಿದ ವರ್ಗಗಳ ಪ್ರವರ್ಗ ............................... (2ಎ, 2ಬಿ, 3ಎ, 3ಬಿ) ಸೇರಿರುತ್ತಾರೆ.

ಸ್ಥಳ :
ದಿನಾಂಕ :

ತಹಶೀಲ್ದಾರರು
............................ ತಾಲ್ಲೂಕು
ಕಛೇರಿಯ ಮೊಹರು

**<u>ಕಲ್ಯಾಣ–ಕರ್ನಾಟಕ ಮೀಸಲಾತಿ ಬಯಸಿ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳಿಗೆ ಪ್ರಮಾಣ ಪತ್ರ:</u>**

**ಅನುಬಂಧ – ಎ**

**ಅರ್ಹತಾ ಪ್ರಮಾಣ ಪತ್ರ**

[ಅನುಚ್ಛೇದ 371 (ಜೆ) ಮೇರೆಗೆ]
(3(3)ನೇ ನಿಯಮ ನೋಡಿ)

[ಪ್ರಮಾಣ ಪತ್ರ ನೀಡಲು ಕರ್ನಾಟಕ ಸಾರ್ವಜನಿಕ ಉದ್ಯೋಗ (ಕಲ್ಯಾಣ – ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ನಿಯಮಗಳು, 2013]

ಶ್ರೀ / ಶ್ರೀಮತಿ ------------------ ರವರು -------------------- ರವರ ಮಗ / ಹೆಂಡತಿಯಾಗಿದ್ದು, ಇವರು ಕರ್ನಾಟಕ ರಾಜ್ಯದ ------------------ ಜಿಲ್ಲೆಯ ----------------- ತಾಲ್ಲೂಕಿನ ------------------- ಗ್ರಾಮ / ಪಟ್ಟಣದ ಸ್ಥಳೀಯ ವ್ಯಕ್ತಿಯಾಗಿದ್ದಾರೆ.

ಸ್ಥಳ: --------------------
ದಿನಾಂಕ: ------------------

ಹೆಸರು --------------------
ಅಸಿಸ್ಟೆಂಟ್ ಕಮೀಷನರ್
-----------------ಉಪವಿಭಾಗ
-----------------ಜಿಲ್ಲೆ

(ಸಕ್ಷಮ ಪ್ರಾಧಿಕಾರಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಲಾದ ಅಂತಿಮ ದಿನಾಂಕದಂದು ಅಭ್ಯರ್ಥಿಯು ಸಾರ್ವಜನಿಕ ಉದ್ಯೋಗ ಆದೇಶದಂತೆ ಸ್ಥಳೀಯ ವ್ಯಕ್ತಿಯೆಂದು ಅರ್ಹತೆ ಪಡೆದಿರುತ್ತಾನೆಂದು ಒಂದು ಅಡಿ ಟಿಪ್ಪಣಿಯನ್ನು ದಾಖಲಿಸುವುದು.)

**ಅನುಬಂಧ – ಡಿ**

**ಸ್ವಗ್ರಾಮ ಪ್ರಮಾಣಪತ್ರ**

(Home Town Certificate)

[ಅನುಚ್ಛೇದ 371 (ಜೆ) ಮೇರೆಗೆ]
(4 (ಇ) ನಿಯಮ ನೋಡಿ)

[ ಪ್ರಮಾಣಪತ್ರಗಳ ನೀಡಿಕೆಗಾಗಿ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಬಾದ್ – ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ನಿಯಮಗಳು, 2013]

ಶ್ರೀ / ಶ್ರೀಮತಿ ------------------ ರವರು -------------------- ರವರ ಮಗ / ಹೆಂಡತಿಯಾಗಿದ್ದು, ಇವರು ಕರ್ನಾಟಕ ರಾಜ್ಯದ ------------------ ಜಿಲ್ಲೆಯ ----------------- ತಾಲ್ಲೂಕಿನ ------------------- ಗ್ರಾಮ / ಪಟ್ಟಣವನ್ನು ತನ್ನ ಸ್ವಗ್ರಾಮ / ಸ್ಥಳ ಎಂದು ತನ್ನ ಸೇವಾ ಪುಸ್ತಕದಲ್ಲಿ ಘೋಷಿಸಿರುತ್ತಾರೆ.

ಸೇವಾ ಪುಸ್ತಕದಲ್ಲಿರುವ ನಮೂದನ್ನು ನಾನು ಖುದ್ದಾಗಿ ಪರಿಶೀಲಿಸಿದ್ದೇನೆ ಮತ್ತು ಮೇಲಿನ ನಮೂದು 01–01–2013ಕ್ಕೆ ಮುಂಚೆ ಸೇವಾ ಪುಸ್ತಕದಲ್ಲಿ ನಮೂದು ಮಾಡಲಾಗಿತ್ತೆಂದು ಸ್ವತಃ ಮನವರಿಕೆ ಮಾಡಿಕೊಂಡಿರುತ್ತೇನೆ.

ಸ್ಥಳ: ------------------------
ದಿನಾಂಕ: ----------------

ಹೆಸರು: --------------------------
ಪದನಾಮ -----------------
ಕಛೇರಿ -------------
ಇಲಾಖೆ-------------

**ಟಿಪ್ಪಣಿ: ಈ ಕೆಳಗೆ ನಮೂದಿಸಿರುವ ಖಾಲಿ ಹುದ್ದೆಗಳ ಸಂಖ್ಯೆ ಮತ್ತು ಮೀಸಲಾತಿ ವರ್ಗೀಕರಣವು ತಾತ್ಕಾಲಿಕವಾಗಿದ್ದು, ಅನಿವಾರ್ಯ ಸಂದರ್ಭದಲ್ಲಿ ಬದಲಾವಣೆಗೆ ಒಳಪಟ್ಟಿರುತ್ತದೆ.**

## ಅನುಬಂಧ– ಎ

## ಪೊಲೀಸ್ ಆಯುಕ್ತರವರ ಕಛೇರಿ, ಬೆಂಗಳೂರು ನಗರ

**i)** **ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್) (ಪುರುಷ) (ಪ್ರಶಂಸನೀಯ ಕ್ರೀಡಾಪಟು)– 53 ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಗಿನಂತಿದೆ:**

| ವರ್ಗ | ಹುದ್ದೆಗಳ ಸಂಖ್ಯೆ |
|---|---|
| ಸಾಮಾನ್ಯ ವರ್ಗ | 26 |
| ಪರಿಶಿಷ್ಟ ಜಾತಿ | 9 |
| ಪರಿಶಿಷ್ಟ ಪಂಗಡ | 2 |
| ಪ್ರವರ್ಗ–1 | 2 |
| ಪ್ರವರ್ಗ–2ಎ | 8 |
| ಪ್ರವರ್ಗ–2ಬಿ | 2 |
| ಪ್ರವರ್ಗ–3ಎ | 2 |
| ಪ್ರವರ್ಗ–3ಬಿ | 2 |
| **ಒಟ್ಟು** | **53** |

**ii)** **ಮಹಿಳಾ ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್) (ಪ್ರಶಂಸನೀಯ ಕ್ರೀಡಾಪಟು) 17 ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಗಿನಂತಿದೆ:**

| ವರ್ಗ | ಹುದ್ದೆಗಳ ಸಂಖ್ಯೆ |
|---|---|
| ಸಾಮಾನ್ಯ ವರ್ಗ | 8 |
| ಪರಿಶಿಷ್ಟ ಜಾತಿ | 3 |
| ಪರಿಶಿಷ್ಟ ಪಂಗಡ | 1 |
| ಪ್ರವರ್ಗ–1 | 1 |
| ಪ್ರವರ್ಗ–2ಎ | 2 |
| ಪ್ರವರ್ಗ–2ಬಿ | 1 |
| ಪ್ರವರ್ಗ–3ಎ | 1 |
| ಪ್ರವರ್ಗ–3ಬಿ | 0 |
| **ಒಟ್ಟು** | **17** |

ಸಹಿ/–
ಪೊಲೀಸ್ ಆಯುಕ್ತರು,
ಬೆಂಗಳೂರು ನಗರ, ಬೆಂಗಳೂರು.

## ಅನುಬಂಧ– ಎ

## ಪೊಲೀಸ್ ಆಯುಕ್ತರವರ ಕಛೇರಿ, ಕಲಬುರಗಿ ನಗರ

**i) ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್) (ಪುರುಷ) (ಪ್ರಶಂಸನೀಯ ಕ್ರೀಡಾಪಟು) (ಸ್ಥಳೀಯ) 06 ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಗಿನಂತಿದೆ:**

| ವರ್ಗ | ಹುದ್ದೆಗಳ ಸಂಖ್ಯೆ |
|---|---|
| ಸಾಮಾನ್ಯ ವರ್ಗ | 3 |
| ಪರಿಶಿಷ್ಟ ಜಾತಿ | 1 |
| ಪರಿಶಿಷ್ಟ ಪಂಗಡ | 1 |
| ಪ್ರವರ್ಗ–1 | 1 |
| ಪ್ರವರ್ಗ–2ಎ | 0 |
| ಪ್ರವರ್ಗ–2ಬಿ | 0 |
| ಪ್ರವರ್ಗ–3ಎ | 0 |
| ಪ್ರವರ್ಗ–3ಬಿ | 0 |
| **ಒಟ್ಟು** | 6 |

**ii) ಮಹಿಳಾ ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್) (ಪ್ರಶಂಸನೀಯ ಕ್ರೀಡಾಪಟು) (ಸ್ಥಳೀಯ) 02 ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಗಿನಂತಿದೆ:**

| ವರ್ಗ | ಹುದ್ದೆಗಳ ಸಂಖ್ಯೆ |
|---|---|
| ಸಾಮಾನ್ಯ ವರ್ಗ | 1 |
| ಪರಿಶಿಷ್ಟ ಜಾತಿ | 1 |
| ಪರಿಶಿಷ್ಟ ಪಂಗಡ | 0 |
| ಪ್ರವರ್ಗ–1 | 0 |
| ಪ್ರವರ್ಗ–2ಎ | 0 |
| ಪ್ರವರ್ಗ–2ಬಿ | 0 |
| ಪ್ರವರ್ಗ–3ಎ | 0 |
| ಪ್ರವರ್ಗ–3ಬಿ | 0 |
| **ಒಟ್ಟು** | 2 |

**iii) ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್) (ಪುರುಷ) (ಪ್ರಶಂಸನೀಯ ಕ್ರೀಡಾಪಟು) (ಮಿಕ್ಕುಳಿದ) 02 ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಗಿನಂತಿದೆ:**

| **ವರ್ಗ** | **ಹುದ್ದೆಗಳ ಸಂಖ್ಯೆ** |
|---|---|
| ಸಾಮಾನ್ಯ ವರ್ಗ | 1 |
| ಪರಿಶಿಷ್ಟ ಜಾತಿ | 1 |
| ಪರಿಶಿಷ್ಟ ಪಂಗಡ | 0 |
| ಪ್ರವರ್ಗ–1 | 0 |
| ಪ್ರವರ್ಗ–2ಎ | 0 |
| ಪ್ರವರ್ಗ–2ಬಿ | 0 |
| ಪ್ರವರ್ಗ–3ಎ | 0 |
| ಪ್ರವರ್ಗ–3ಬಿ | 0 |
| **ಒಟ್ಟು** | 2 |

ಸಹಿ/–
ಪೊಲೀಸ್ ಆಯುಕ್ತರು,
ಕಲಬುರಗಿ ನಗರ, ಕಲಬುರಗಿ.

## ಅನುಬಂಧ– ಎ

## ಪೊಲೀಸ್ ಆಯುಕ್ತರವರ ಕಛೇರಿ, ಬೆಂಗಳೂರು ನಗರ

**i)** **ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಸಿವಿಲ್) (ಪುರುಷ) (ಪ್ರಶಂಸನೀಯ ಕ್ರೀಡಾಪಟು) (ಮಿಕ್ಕುಳಿದ) 11 ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಗಿನಂತಿದೆ:**

| ವರ್ಗ | ಹುದ್ದೆಗಳ ಸಂಖ್ಯೆ |
|---|---|
| ಸಾಮಾನ್ಯ ವರ್ಗ | 5 |
| ಪರಿಶಿಷ್ಟ ಜಾತಿ | 2 |
| ಪರಿಶಿಷ್ಟ ಪಂಗಡ | 1 |
| ಪ್ರವರ್ಗ–1 | 1 |
| ಪ್ರವರ್ಗ–2ಎ | 1 |
| ಪ್ರವರ್ಗ–2ಬಿ | 1 |
| ಪ್ರವರ್ಗ–3ಎ | 0 |
| ಪ್ರವರ್ಗ–3ಬಿ | 0 |
| **ಒಟ್ಟು** | 11 |

**ii)** **ಮಹಿಳಾ ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಸಿವಿಲ್) (ಪ್ರಶಂಸನೀಯ ಕ್ರೀಡಾಪಟು) (ಮಿಕ್ಕುಳಿದ) 03 ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಗಿನಂತಿದೆ:**

| ವರ್ಗ | ಹುದ್ದೆಗಳ ಸಂಖ್ಯೆ |
|---|---|
| ಸಾಮಾನ್ಯ ವರ್ಗ | 1 |
| ಪರಿಶಿಷ್ಟ ಜಾತಿ | 1 |
| ಪರಿಶಿಷ್ಟ ಪಂಗಡ | 1 |
| ಪ್ರವರ್ಗ–1 | 0 |
| ಪ್ರವರ್ಗ–2ಎ | 0 |
| ಪ್ರವರ್ಗ–2ಬಿ | 0 |
| ಪ್ರವರ್ಗ–3ಎ | 0 |
| ಪ್ರವರ್ಗ–3ಬಿ | 0 |
| **ಒಟ್ಟು** | 3 |

**iii) ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಸಿವಿಲ್) (ಪುರುಷ) (ಸೇವಾನಿರತ) (ಪ್ರಶಂಸನೀಯ ಕ್ರೀಡಾಪಟು) (ಮಿಕ್ಕುಳಿದ) 02 ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಗಿನಂತಿದೆ:**

| **ವರ್ಗ** | **ಹುದ್ದೆಗಳ ಸಂಖ್ಯೆ** |
|---|---|
| ಸಾಮಾನ್ಯ ವರ್ಗ | 1 |
| ಪರಿಶಿಷ್ಟ ಜಾತಿ | 1 |
| ಪರಿಶಿಷ್ಟ ಪಂಗಡ | 0 |
| ಪ್ರವರ್ಗ–1 | 0 |
| ಪ್ರವರ್ಗ–2ಎ | 0 |
| ಪ್ರವರ್ಗ–2ಬಿ | 0 |
| ಪ್ರವರ್ಗ–3ಎ | 0 |
| ಪ್ರವರ್ಗ–3ಬಿ | 0 |
| **ಒಟ್ಟು** | 2 |

**iv) ಮಹಿಳಾ ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಸಿವಿಲ್) (ಸೇವಾನಿರತ) (ಪ್ರಶಂಸನೀಯ ಕ್ರೀಡಾಪಟು) (ಮಿಕ್ಕುಳಿದ) 01 ಖಾಲಿ ಹುದ್ದೆಯ ವರ್ಗೀಕರಣ ಈ ಕೆಳಗಿನಂತಿದೆ:**

| **ವರ್ಗ** | **ಹುದ್ದೆಗಳ ಸಂಖ್ಯೆ** |
|---|---|
| ಸಾಮಾನ್ಯ ವರ್ಗ | 0 |
| ಪರಿಶಿಷ್ಟ ಜಾತಿ | 1 |
| ಪರಿಶಿಷ್ಟ ಪಂಗಡ | 0 |
| ಪ್ರವರ್ಗ–1 | 0 |
| ಪ್ರವರ್ಗ–2ಎ | 0 |
| ಪ್ರವರ್ಗ–2ಬಿ | 0 |
| ಪ್ರವರ್ಗ–3ಎ | 0 |
| ಪ್ರವರ್ಗ–3ಬಿ | 0 |
| **ಒಟ್ಟು** | 1 |

ಸಹಿ/–
ಪೊಲೀಸ್ ಆಯುಕ್ತರು,
ಬೆಂಗಳೂರು ನಗರ, ಬೆಂಗಳೂರು.

## ಅನುಬಂಧ– ಎ

## ಪೊಲೀಸ್ ಆಯುಕ್ತರವರ ಕಛೇರಿ, ಬೆಂಗಳೂರು ನಗರ

**i) ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಸಿವಿಲ್) (ಪುರುಷ) (ಪ್ರಶಂಸನೀಯ ಕ್ರೀಡಾಪಟು) (ಸ್ಥಳೀಯ) 01 ಖಾಲಿ ಹುದ್ದೆಯ ವರ್ಗೀಕರಣ ಈ ಕೆಳಗಿನಂತಿದೆ:**

| ವರ್ಗ | ಹುದ್ದೆಗಳ ಸಂಖ್ಯೆ |
|---|---|
| ಸಾಮಾನ್ಯ ವರ್ಗ | 1 |
| ಪರಿಶಿಷ್ಟ ಜಾತಿ | 0 |
| ಪರಿಶಿಷ್ಟ ಪಂಗಡ | 0 |
| ಪ್ರವರ್ಗ–1 | 0 |
| ಪ್ರವರ್ಗ–2ಎ | 0 |
| ಪ್ರವರ್ಗ–2ಬಿ | 0 |
| ಪ್ರವರ್ಗ–3ಎ | 0 |
| ಪ್ರವರ್ಗ–3ಬಿ | 0 |
| **ಒಟ್ಟು** | 1 |

ಸಹಿ/–
ಪೊಲೀಸ್ ಆಯುಕ್ತರು,
ಬೆಂಗಳೂರು ನಗರ, ಬೆಂಗಳೂರು.

## ಅನುಬಂಧ– ಎ

## ಪೊಲೀಸ್ ಆಯುಕ್ತರವರ ಕಛೇರಿ, ಕಲಬುರಗಿ ನಗರ

**i) ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಸಿವಿಲ್) (ಪುರುಷ) (ಪ್ರಶಂಸನೀಯ ಕ್ರೀಡಾಪಟು) (ಸ್ಥಳೀಯ) 01 ಖಾಲಿ ಹುದ್ದೆಯ ವರ್ಗೀಕರಣ ಈ ಕೆಳಗಿನಂತಿದೆ:**

| ವರ್ಗ | ಹುದ್ದೆಗಳ ಸಂಖ್ಯೆ |
|---|---|
| ಸಾಮಾನ್ಯ ವರ್ಗ | 0 |
| ಪರಿಶಿಷ್ಟ ಜಾತಿ | 1 |
| ಪರಿಶಿಷ್ಟ ಪಂಗಡ | 0 |
| ಪ್ರವರ್ಗ–1 | 0 |
| ಪ್ರವರ್ಗ–2ಎ | 0 |
| ಪ್ರವರ್ಗ–2ಬಿ | 0 |
| ಪ್ರವರ್ಗ–3ಎ | 0 |
| ಪ್ರವರ್ಗ–3ಬಿ | 0 |
| **ಒಟ್ಟು** | 1 |

**ii) ಮಹಿಳಾ ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಸಿವಿಲ್) (ಪ್ರಶಂಸನೀಯ ಕ್ರೀಡಾಪಟು) (ಸ್ಥಳೀಯ) 01 ಖಾಲಿ ಹುದ್ದೆಯ ವರ್ಗೀಕರಣ ಈ ಕೆಳಗಿನಂತಿದೆ:**

| **ವರ್ಗ** | **ಹುದ್ದೆಗಳ ಸಂಖ್ಯೆ** |
|---|---|
| ಸಾಮಾನ್ಯ ವರ್ಗ | 0 |
| ಪರಿಶಿಷ್ಟ ಜಾತಿ | 1 |
| ಪರಿಶಿಷ್ಟ ಪಂಗಡ | 0 |
| ಪ್ರವರ್ಗ–1 | 0 |
| ಪ್ರವರ್ಗ–2ಎ | 0 |
| ಪ್ರವರ್ಗ–2ಬಿ | 0 |
| ಪ್ರವರ್ಗ–3ಎ | 0 |
| ಪ್ರವರ್ಗ–3ಬಿ | 0 |
| **ಒಟ್ಟು** | 1 |

ಸಹಿ/–
ಪೊಲೀಸ್ ಆಯುಕ್ತರು,
ಕಲಬುರಗಿ ನಗರ, ಕಲಬುರಗಿ